ಸಂಪುಟ : 10 ಸಂಚಿಕೆ: 117 ಪುಟ : 4+2 ಬೆಲೆ: 3.00 ಮಂಗಳವಾರ ಜೂನ್ 10 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 117 Pages : 4+2 Price : 3.00 Tuesday June 10 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಇಂದಿನ ನೀರು ಪೂರೈಕೆ ವಿವರ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಜೂ. 10ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

**ಸ್ಥಳಗಳ ವಿವರ:** ವಾರ್ಡ್ ನಂ 22 - ಅಮರೇಶ್ವರ ನಗರ, ತಾಜ್ ನಗರ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 35 - ಸಾಯಿನಾಥ ಗುಡಿ, ಬಯಲು ಆಂಜನೇಯ ಗುಡಿ, ಹಾಸ್ಟೆಲ್ ಭಾಗ, ಕಳಸಾಪುರ ರಸ್ತೆ, ನೀಲಮ್ಮ ತಾಯಿ ಮಠ ಉಳಿದ ಕೆಲವು ಭಾಗಗಳು. ವಾರ್ಡ್ ನಮನ. 4 - ಮಂಜುನಾಥ್ ನಗರ, 275 ಮನೆ, ಬಿ ಎಸ್ ಎನ್ ಎಲ್ ಆಫೀಸ್, ಹುಯಿಲಗೋಳ ರಸ್ತೆ ಬಲಭಾಗದ ಪೂರ್ತಿ ಭಾಗಗಳು, ಕಣವಿ ಪ್ಲಾಟ್ ಪೂರ್ತಿ ಭಾಗಗಳು. ವಾರ್ಡ್ ನಂ. 16, 21 - ರಹಮತ್ ನಗರ 4 ಭಾಗಗಳು, ಗುಡದೂರ ಸ್ವಾಮಿ ಮಠ, ಕುಂಬೇಶ್ವರ ನಗರದ 4 ಭಾಗಗಳು ಉಳಿದ ಕೆಲವು ಭಾಗಗಳು.

**ಪ್ರಕಟಣೆ:** ತಮಗೆ ನೀರು ಸಾಕಾದಾಗ ತಮ್ಮ ತಮ್ಮ ನೀರಿನ ನಳಗಳನ್ನು ಬಂದ್ ಮಾಡುವ ಮೂಲಕ ನೀರು ಪೋಲಾಗದಂತೆ ತಡೆಯುವಲ್ಲಿ ಮುತುವರ್ಜಿ ವಹಿಸಬೇಕೆಂದು ಹಾಗೂ ತಮ್ಮ ನೀರಿನ ಕರ ಪಾವತಿಸುವಲ್ಲಿ ತಾವು ವಿಳಂಬ ಮಾಡದೇ ತಮ್ಮ ಬಾಕಿ ಇರುವ ನೀರಿನ ಕರವನ್ನು ನಗರಸಭೆಗೆ ಪಾವತಿಸಬೇಕೆಂದು ತಿಳಿಸಲಾಗಿದೆ. ಒಂದು ವೇಳೆ ಈ ರೀತಿ ಮಾಡದೇ ಹೋದ ಸಂದರ್ಭದಲ್ಲಿ ತಮಗೆ ದಂಡ ವಿಧಿಸಿ ತಮ್ಮ ನೀರಿನ ನಳವನ್ನು ಬಂದ್ ಮಾಡಲಾಗುವುದು ಎಂದು ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಪಂ. ಪಂಚಾಕ್ಷರಿ ಗವಾಯಿಗಳವರ 81ನೇ, ಪಂ. ಪುಟ್ಟರಾಜ ಗವಾಯಿಗಳವರ 15ನೇ ಪುಣ್ಯಸ್ಮರಣೋತ್ಸವ ಜೂನ್ 12ರಿಂದ

## ಉಭಯ ಗುರುಗಳ ಜಾತ್ರಾ ಮಹೋತ್ಸವ

■ವಿಜಯಸಾಕ್ಷಿ ಸುದ್ದಿ, ಗದಗ

ಪರಮಪೂಜ್ಯ ಗಾನಯೋಗಿ ಶಿವಯೋಗಿ ಲಿಂ. ಪಂ. ಪಂಚಾಕ್ಷರಿ ಗವಾಯಿಗಳವರ 81ನೇ, ಪದ್ಮಭೂಷಣ ಲಿಂ. ಡಾ. ಪಂ. ಪುಟ್ಟರಾಜ ಕವಿ ಗವಾಯಿಗಳವರ 15ನೇ ಪುಣ್ಯಸ್ಮರಣೋತ್ಸವ ಮತ್ತು ಉಭಯ ಗುರುಗಳ ಜಾತ್ರಾ ಮಹೋತ್ಸವ ಕಾರ್ಯಕ್ರಮ ಜೂನ್ 12ರಿಂದ ಆರಂಭವಾಗಲಿದ್ದು, ಕೀರ್ತನ, ಸಂಗೀತ, ಉಪನ್ಯಾಸ, ನಾಟಕ, ಅಂಥರಗೋಷ್ಠಿ, ಗ್ರಂಥ ಬಿಡುಗಡೆ ಸೇರಿದಂತೆ ವಿವಿಧ ಕಾರ್ಯಕ್ರಮ ನಡೆಯಲಿವೆ ಎಂದು ಡಾ. ಕಲ್ಲಯ್ಯಜ್ಜನವರು ಮಾಹಿತಿ ನೀಡಿದರು.

ನಗರದ ಪಂಚಾಕ್ಷರಿ ಗವಾಯಿ ಮಠದಲ್ಲಿ ಸೋಮವಾರ ಸುದ್ದಿಗೋಷ್ಠಿ ನಡೆಸಿ ಶ್ರೀಗಳು ಮಾತನಾಡಿದರು.

ಜೂನ್ 12ರಿಂದ 16ರವರೆಗೆ ಸಿದ್ಧಾರೂಢ ಮಠದ ಶ್ರೀ ಕೃಷ್ಣೇಗೌಡರು ಹಾಗೂ ವೇದಮೂರ್ತಿ ಕುಮಾರಸ್ವಾಮಿ ಹಿರೇಮಠ ಅವರಿಂದ ಕರ್ತೃ ಗದ್ದುಗೆಗೆ ಪ್ರತಿದಿನ ರುದ್ರಾಭಿಷೇಕ ಹಾಗೂ ಸಹಸ್ರ ಬಿಲ್ವಾರ್ಚನೆ ನಡೆಯಲಿದೆ. ಜೂನ್ 12ರಂದು ಧರ್ಮಸಭೆ ಹಾಗೂ ಕೀರ್ತನ ಸಮ್ಮೇಳನ ನಡೆಯಲಿದ್ದು, ಗುರು ಮಹಾಂತಯ್ಯ ಶಾಸ್ತ್ರಿ ರಚಿಸಿರುವ 'ಗೀತ ಮಂದಾರ' ಗ್ರಂಥ ಬಿಡುಗಡೆ ಕಾರ್ಯಕ್ರಮ ನಡೆಯಲಿದೆ. ರಾತ್ರಿ ಶ್ರೀ ವೀರೇಶ್ವರ ಪುಣ್ಯಾಶ್ರಮದ ವಿದ್ಯಾರ್ಥಿಗಳಿಂದ 'ಸೊನ್ನಲಗಿ ಶ್ರೀ ಸಿದ್ದರಾಮೇಶ್ವರ' ನಾಟಕ ಜರುಗಲಿದೆ ಎಂದು ತಿಳಿಸಿದರು.

ಜೂನ್ 13ರಂದು ಶಿರಹಟ್ಟಿ ಮಹಾಸಂಸ್ಥಾನ ಪೀಠದ ಜಗದ್ಗುರು ಫಕೀರ ದಿಂಗಾಲೇಶ್ವರ ಮಹಾಸ್ವಾಮೀಜಿಗಳ ಸಾನ್ನಿಧ್ಯದಲ್ಲಿ ಕೀರ್ತನ ಸಮ್ಮೇಳನ ಹಾಗೂ ಅಂಥರಗೋಷ್ಠಿ,



ಗಣ್ಯ ವ್ಯಕ್ತಿಗಳಿಗೆ ಸನ್ಮಾನ ಕಾರ್ಯಕ್ರಮ ನಡೆಯಲಿದೆ. ರಾತ್ರಿ 10.30ಕ್ಕೆ ಶ್ರೀ ಕುಮಾರೇಶ್ವರ ಕೃಪಾಪೋಷಿತ ಪಂಚಾಕ್ಷರ ಗವಾಯಿಗಳ ನಾಟ್ಯ ಸಂಘದಿಂದ 'ಬಂದರ ನೋಡ ಬಂಗಾರಿ' ನಾಟಕ ಪ್ರದರ್ಶನಗೊಳ್ಳಲಿದೆ. ಸಾನ್ನಿಧ್ಯವನ್ನು ಅಭಿನವ ಪಂಚಾಕ್ಷರ ಶಿವಾಚಾರ್ಯ ಮಹಾಸ್ವಾಮೀಜಿಗಳು ಹಾಗೂ ಅಧ್ಯಕ್ಷತೆಯನ್ನು ಡಾ. ಕಲ್ಲಯ್ಯಜ್ಜನವರು ವಹಿಸಿಕೊಳ್ಳಲಿದ್ದಾರೆ ಎಂದು ತಿಳಿಸಿದರು. ಜೂನ್ 16ರಂದು ಧರ್ಮೋತ್ತೇಜಕ ಮಹಾಸಭೆ ನಡೆಯಲಿದ್ದು, ಕಾರ್ಯಕ್ರಮದ ಅಧ್ಯಕ್ಷತೆಯನ್ನು ಮುರುಘಾಮಠದ ಮಲ್ಲಿಕಾರ್ಜುನ ಮಹಾಸ್ವಾಮಿಜಿಗಳು ವಹಿಸಿಕೊಳ್ಳಲಿದ್ದಾರೆ. ಗಂಗಾವತಿಯ ಕಲ್ಮಠದ ಡಾ. ಕೊಟ್ಟೂರು ಮಹಾಸ್ವಾಮಿಗಳು ನೇತೃತ್ವವನ್ನು ವಹಿಸಿಕೊಳ್ಳಲಿದ್ದಾರೆ. ಜೂನ್ 17ರಂದು ರಾತ್ರಿ 10:30ಕ್ಕೆ ಶ್ರೀ ಕುಮಾರೇಶ್ವರ ಕೃಪಾಪೋಷಿತ ಪಂಚಾಕ್ಷರ ಗವಾಯಿಗಳವರ ನಾಟ್ಯ ಸಂಘದಿಂದ 'ಗಡಗಿ ಜ್ವಾಕಿ ತಂಗಿ' ಎನ್ನುವ ಸಾಮಾಜಿಕ ನಾಟಕ ನಡೆಯಲಿದೆ. ಸ್ತ್ರೀ ಪಾತ್ರದಲ್ಲಿ ನಟನೆಯ ಮೂಲಕ ಹೆಸರುವಾಸಿಯಾಗಿರುವ ಮಹಾದೇವ ಗುಡ್ಲಿ ಹೊಸೂರು ಇವರು ಈ ನಾಟಕವನ್ನು ರಚಿಸಿ ನಿರ್ದೇಶಿಸಿದ್ದಾರೆ. ಶ್ರೀ ವೀರಭದ್ರೇಶ್ವರ ಡ್ರಾಮಾ ಸೀನ್ಸ್ ಇವರು ರಂಗ ಸಜ್ಜಿಕೆಯ ಸೇವೆ ಮಾಡಿದ್ದಾರೆ. ನಂತರ ಪೂಜ್ಯರ ಮಂಗಳ ಗೀತೆಯೊಂದಿಗೆ ಪುಣ್ಯ ಸ್ಮರಣೋತ್ಸವ ಕಾರ್ಯಕ್ರಮಗಳು ಸಂಪನ್ನಗೊಳಲಿವೆ ಎಂದು ಕಲ್ಲಯ್ಯಜ್ಜನವರು ತಿಳಿಸಿದರು. ಈ ವೇಳೆ ನಿಂಗಪ್ಪ ಎಸ್.ಕೆಂಗಾರ, ಪ್ರಕಾಶ ಚ.ಬಸರಿಗಿಡದ, ವಸಂತಗೌಡ್ರ ಬಿ.ಪೊಲೀಸ್‌ಪಾಟೀಲ, ಚನ್ನವೀರಸ್ವಾಮಿ ಜ.ಬಾಳಿಹಳ್ಳಿಮಠ, ಪರಶುರಾಮ ಎಫ್. ಕಟ್ಟಿಮನಿ, ಪ್ರಭುಲಿಂಗಯ್ಯ ಸಿ.ಹಿರೇಮಠ, ಚನ್ನಬಸಯ್ಯ ಪಿ.ಬಂಕಾಪೂರಮಠ, ಮುರುಘಯ್ಯ ಆರ್.ಹಿರೇಮಠ, ಶಿವರುದ್ರಪ್ಪ ಆರ್.ಇಟಗಿ, ಸಂಗಮೇಶ ಟಿ.ದುಂದೂರ ಮುಂತಾದವರು ಉಪಸ್ಥಿತರಿದ್ದರು.

### ಪ್ರಶಸ್ತಿ ಪ್ರದಾನ

2025ನೇ ಸಾಲಿನ ಪಂ. ಪಂಚಾಕ್ಷರ ಗವಾಯಿಗಳವರ ಪುಣ್ಯಸ್ಮರಣೋತ್ಸವದಲ್ಲಿ 'ಕುಮಾರಶ್ರೀ ಪ್ರಶಸ್ತಿ'ಯನ್ನು ವೇ. ವಿರೂಪಾಕ್ಷಯ್ಯ ಶಾಸ್ತ್ರೀ ಹಿರೇಮಠ (ಪ್ರವಚನ ಕ್ಷೇತ್ರ), ರಾಜು ಎಮ್ಮಿಗನೂರ, (ಗಾಯನ ಕ್ಷೇತ್ರ), ಪ್ರಕಾಶ ಚನ್ನಪ್ಪ ಬಸರಿಗಿಡದ-ಗದಗ (ಭೂದಾನ ಕ್ಷೇತ್ರ) ಮತ್ತು 'ಪದ್ಮಭೂಷಣ ಪಂ. ಪುಟ್ಟರಾಜ ಪ್ರಶಸ್ತಿ'ಯನ್ನು ಶ್ರೀ ರಾಮಣ್ಣ ನಸಬಿ (ಸಂಗೀತ ಕ್ಷೇತ್ರ) ಇವರಿಗೆ ನೀಡಲಾಗುವುದು.

ಜೂನ್ 14ರಂದು ಮುಂಡರಗಿ ಸಂಸ್ಥಾನ ಮಠದ ಶ್ರೀ ಅನ್ನದಾನೀಶ್ವರ ಶಿವಯೋಗಿಗಳವರ ಸಾನ್ನಿಧ್ಯದಲ್ಲಿ ಕೀರ್ತನ ಸಮ್ಮೇಳನ ನಡೆಯಲಿದೆ. ಇದೇ ದಿನ ಉಚಿತ ಆರೋಗ್ಯ ತಪಾಸಣಾ ಶಿಬಿರ, ಧ್ವನಿ ಸುರುಳಿ ಬಿಡುಗಡೆ ಕಾರ್ಯಕ್ರಮ ಕೂಡ ನಡೆಯಲಿದೆ. ಜೂನ್ 15ರಂದು ಶಿವಾನುಭವಗೋಷ್ಠಿ, ಸಂಗೀತ ಸಭೆಯನ್ನು ಆಯೋಜಿಸಲಾಗಿದೆ. ಸಂಗೀತ ಸಭೆಯಲ್ಲಿ ವೀರೇಶ ಕಿತ್ತೂರು, ವೀರಭದ್ರಯ್ಯ ಯರಗಲ್ ಮೈಸೂರು, ಹನುಮಂತಪ್ಪ ಗೋನವಾರ, ಸದಾಶಿವ ಪಾಟೀಲ ಕೊಪ್ಪಳ ಸೇರಿದಂತೆ ವಿವಿಧ ಕಲಾವಿದರು ಭಾಗವಹಿಸಲಿದ್ದಾರೆ ಎಂದು ಡಾ. ಕಲ್ಲಯ್ಯಜ್ಜನವರು ತಿಳಿಸಿದರು.

## ಖಾಲಿ ಉಳಿದ ಸೀಟಗಳಿಗೆ ಪ್ರವೇಶ

■ವಿಜಯಸಾಕ್ಷಿ ಸುದ್ದಿ, ಗದಗ

ಶ್ರೀ ಕೆ.ಎಚ್ ಪಾಟೀಲ್ ಸರ್ಕಾರಿ ಐ.ಟಿ.ಐ ಬೆಟಗೇರಿ-ಗದಗ ಇಲ್ಲಿ ಆಗಸ್ಟ್-2025ನೇ ಸಾಲಿನಲ್ಲಿ ಮೊದಲನೇ ಸುತ್ತಿನ ಆನ್‌ಲೈನ್ ಪ್ರವೇಶದ ನಂತರ ಖಾಲಿ ಉಳಿದ ಸೀಟಗಳಿಗೆ ಆಫ್‌ಲೈನ್ ಪ್ರವೇಶಾತಿಯನ್ನು ಮಾಡಿಕೊಳ್ಳಲಾಗುವುದು. ಎಸ್.ಎಸ್.ಎಲ್.ಸಿ ಉತ್ತೀರ್ಣರಾದ ಅರ್ಹ ಆಸಕ್ತ ಅಭ್ಯರ್ಥಿಗಳು ಎನ್.ಸಿ.ವಿ.ಟಿ ಸಂಯೋಜಿತ ಸಿ.ಟಿ.ಎಸ್ ಯೋಜನೆ ಅಡಿಯಲ್ಲಿರುವ ಇಲೆಕ್ಟ್ರಾನಿಕ್ಸ ಮೆಕ್ಯಾನಿಕ್, ಕೋಪಾ, ಡ್ರೆಸ್ ಮೇಕಿಂಗ್, ಮೆಕ್ಯಾನಿಕ್ ಇಲೆಕ್ಟ್ರಿಕ್ ವೆಹಿಕಲ್, ಸಿ.ಎನ್.ಸಿ, ರೋಬೊಟಿಕ್ಸ, ಅಟೋಮೇಶನ್ ಮತ್ತು ವರ್ಚುವಲ್ ವೇರಿಫೈಯರ್ ಈ ವೃತ್ತಿಗಳಲ್ಲಿ ಖಾಲಿ ಉಳಿದ ಸೀಟಗಳಿಗೆ ಅರ್ಜಿ ಸಲ್ಲಿಸಿ ಪ್ರವೇಶಾತಿ ಪಡೆಯಲು ತಿಳಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಸಂಬಂಧಿಸಿದ ಮೋ: 9164112342, 9448545683, 9916577247, 9845637419 ಮತ್ತು 9844870604 ಗಳ ಮೂಲಕ ಸಂಪರ್ಕಿಸಬಹುದಾಗಿದೆ ಹಾಗೂ ಕಚೇರಿ ಕೆಲಸದ ವೇಳೆಯಲ್ಲಿ ಖುದ್ದಾಗಿ ಭೇಟಿ ನೀಡಿ ಹೆಚ್ಚಿನ ಮಾಹಿತಿ ಪಡೆಯಬಹುದಾಗಿದೆ ಎಂದು ಶ್ರೀ ಕೆ.ಎಚ್. ಪಾಟೀಲ ಸರ್ಕಾರಿ ಐ.ಟಿ.ಐ ಗದಗ ಪ್ರಾಚಾರ್ಯ/ನೋಡಲ್ ಅಧಿಕಾರಿ ಡಾ. ಮಲ್ಲೂರ ಬಸವರಾಜ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಮೇವುಂಡಿಯಲ್ಲಿ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಭೂಮಿಪೂಜೆ ನೆರವೇರಿಸಿದ ಶಾಸಕ ಜಿ.ಎಸ್. ಪಾಟೀಲ

## ರೈತರ ಮಕ್ಕಳು ಶೈಕ್ಷಣಿಕ ಪ್ರಗತಿ ಹೊಂದಬೇಕು

■ವಿಜಯಸಾಕ್ಷಿ ಸುದ್ದಿ, ಡಂಬಳ

ಕಡು ಬಡವ, ಪ್ರತಿಭಾವಂತ ವಿದ್ಯಾರ್ಥಿಗಳಿಗೆ ವಸತಿ ನಿಲಯಗಳು ಒಂದು ಉತ್ತಮ ವೇದಿಕೆಯಾಗುವಂತೆ ಮಾಡುತ್ತಿರುವ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಕಾರ್ಯ ಶೈಕ್ಷಣಿಕ ಕ್ಷೇತ್ರದಲ್ಲಿ ಮಹತ್ಕಾರ್ಯವಾಗಿದೆ ಎಂದು ರೋಣ ಮತಕ್ಷೇತ್ರದ ಶಾಸಕ ಜಿ.ಎಸ್. ಪಾಟೀಲ್ ಹೇಳಿದರು.

ಡಂಬಳ ಹೋಬಳಿಯ ಮೇವುಂಡಿ ಗ್ರಾಮದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಗದಗ ಇವರ ಸಂಯುಕ್ತ ಆಶ್ರಯದಲ್ಲಿ 8 ಕೋಟಿ 65 ಲಕ್ಷ ರೂ ಅನುದಾನದಲ್ಲಿ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಭೂಮಿಪೂಜೆ ನೆರವೇರಿಸಿ ಅವರು ಮಾತನಾಡುತ್ತಿದ್ದರು.

ಸರಕಾರಿ ಶಾಲಾ-ಕಾಲೇಜುಗಳು ಖಾಸಗಿ ಶಾಲೆಗಳಿಗಿಂತಲೂ ಉತ್ತಮ ಫಲಿತಾಂಶ ಸಾಧಿಸುವಲ್ಲಿ ಯಶಸ್ವಿಯಾಗಿವೆ. ರೈತರು ಮತ್ತು ಈ ಭಾಗದ ರೈತರ ಮಕ್ಕಳು ಶೈಕ್ಷಣಿಕ ಪ್ರಗತಿ ಹೊಂದಬೇಕು. ಈ ಹಿನ್ನೆಲೆಯಲ್ಲಿ ತೋಟಗಾರಿಕಾ ಕಾಲೇಜಿಗೆ 150 ಕೋಟಿ ರೂ ಅನುದಾನದ ಅಗತ್ಯವಿದೆ. ಮೊದಲ ಹಂತದಲ್ಲಿ 45 ಕೋಟಿ ರೂ ವೆಚ್ಚದಲ್ಲಿ ಕಾಲೇಜಿನ ಕಾಮಗಾರಿಗೆ ಶೀಘ್ರವೇ ಚಾಲನೆ ನೀಡಲಾಗುವುದು ಎಂದರು.



ಗದಗ ಜಿಲ್ಲಾ ಅಲ್ಪಸಂಖ್ಯಾತರ ಇಲಾಖೆಯ ಜಿಲ್ಲಾಧಿಕಾರಿ ಅಮಿತ ಬಿದರಿ ಮಾತನಾಡಿ, 120 ವಿದ್ಯಾರ್ಥಿಗಳ ವಸತಿ ನಿಲಯದ ಕಟ್ಟಡ ಈಗಾಗಲೇ ಕಾರ್ಯ ನಿರ್ವಹಿಸುತ್ತಿದ್ದು, ಹೆಚ್ಚಿನ ವಿದ್ಯಾರ್ಥಿಗಳಿಗಾಗಿ ಈ ಕಟ್ಟಡ ನಿರ್ಮಾಣದ ಕಾಮಗಾರಿ ಅನೂಕೂಲವಾಗಲಿದೆ. ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗಾಗಿ ಕೆಎಎಸ್, ಐಎಎಸ್, ಪಿಎಸ್‌ಐ ಸೇರಿದಂತೆ ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಉಚಿತ ತರಬೇತಿಯನ್ನು ಇಲಾಖೆಯಿಂದ ನೀಡಲಾಗುತ್ತಿದೆ. ವಿದ್ಯಾರ್ಥಿಗಳು ಇದರ ಸಂಪೂರ್ಣ ಸದುಪಯೋಗ ಪಡಿಸಿಕೊಳ್ಳಿ ಎಂದು ಹೇಳಿದರು.


ಈ ಸಂದರ್ಭದಲ್ಲಿ ಗ್ರಾ.ಪಂ ಅಧ್ಯಕ್ಷೆ ದುರಗಮ್ಮ ತಳಗೇರಿ, ಗೋಣಿಬಸಪ್ಪ ಕೊರ್ಲಹಳ್ಳಿ, ಬಸುರಡ್ಡಿ ಬಂಡಿಹಾಳ, ಮರಿಯಪ್ಪ ಸಿದ್ದಣ್ಣವರ, ಶರಣಪ್ಪ ಬಂಡಿಹಾಳ, ಯಮನಪ್ಪ ಚುಂಗಿನ, ಶೋಭಾ ಮೇಟಿ, ಭುವನೇಶ್ವರಿ ಕಲ್ಲಕುಟಿಗರ, ಸೋಮಪ್ಪ ಹೈತಾರ, ಹೇಮಂತ ಹಾರೂಗೇರಿ, ಹಾಲಪ್ಪ ಅಮರಗೋಳ, ಅಮರೇಶ ಹಿರೇಮಠ, ಈರಣ್ಣ ಬೆಂಚಿ, ಬಸುರಾಜ ಮೇಟಿ, ನಿಂಗಪ್ಪ ಪೆದ್ದಾರ, ಶಿವು ಚಿಕ್ಕಣ್ಣವರ, ಕುಮಾರ ಸಿದ್ನೆಕೊಪ್ಪ, ಕುಮಾರ ಉದ್ದಂಡಿ, ಪ್ರಥಮ ದರ್ಜೆ ಗುತ್ತಿಗೆದಾರ ಅಜರುದ್ದಿನ ದ್ಯಾಂಪುರ, ವಿಜಯ ಮುಳಗುಂದ, ಕನಕಮೂರ್ತಿ, ಮಳ್ಳಪ್ಪ ಒಂಟಲಭೋವಿ ಸೇರಿದಂತೆ ಗ್ರಾಮದ ಹಿರಿಯರು, ಇಲಾಖೆಯ ಸಿಬ್ಬಂದಿ ವರ್ಗದವರು ಇದ್ದರು.

ಕಾಂಗ್ರೆಸ್ ಪಕ್ಷದ ತಾಲೂಕಾಧ್ಯಕ್ಷ ಡಿ.ಡಿ. ಮೋರನಾಳ ಮಾತನಾಡಿ, ಶಾಸಕ ಜಿ.ಎಸ್. ಪಾಟೀಲರು ಡಂಬಳ ಹೋಬಳಿ ಭಾಗದಲ್ಲಿ ಅತಿ ಹೆಚ್ಚು ಅನುದಾನ ನೀಡುವುದರ ಮೂಲಕ ಡಾಂಬರು ರಸ್ತೆ, ಸಿ.ಸಿ ರಸ್ತೆ, ರೈತರ ಹಿತ ಕಾಯುವುದಕ್ಕಾಗಿ ಕಾಲುವೆಗಳ ನಿರ್ಮಾಣ, ಶೈಕ್ಷಣಿಕ ಪ್ರಗತಿಗಾಗಿ ಹಲವು ವಸತಿ ನಿಲಯಗಳ, ಶಾಲಾ ಕೊಠಡಿಗಳ ನಿರ್ಮಾಣಕ್ಕೆ ಅನುದಾನ ಒದಗಿಸುವುದರ ಮೂಲಕ ಈ ಭಾಗದ ರೈತರ, ಕೂಲಿ ಕಾರ್ಮಿಕರ, ವಿದ್ಯಾರ್ಥಿಗಳ ಪ್ರಗತಿಗಾಗಿ ಶ್ರಮಿಸುತ್ತಿರುವ ಧೀಮಂತ ನಾಯಕರಾಗಿದ್ದಾರೆ ಎಂದರು.

## ವಿಶೇಷ ನೋಂದಣಿ ಅಭಿಯಾನ ಜೂನ್ 14ಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ಪಂಚ ಗ್ಯಾರಂಟಿಗಳಿಂದ ದೂರವಾಗಿರುವ ಅರ್ಹ ಕುಟುಂಬಗಳನ್ನು ಪಂಚ ಗ್ಯಾರಂಟಿ ಯೋಜನೆ ವ್ಯಾಪ್ತಿಗೆ ಸೇರಿಸಲು ಗದಗ ತಾಲೂಕು ಮಟ್ಟದ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ವತಿಯಿಂದ ಜೂನ್ 14ರಂದು ಬೆಳಿಗ್ಗೆ 10ರಿಂದ ಸಂಜೆ 5ರವರೆಗೆ ವಿಶೇಷ ಅಭಿಯಾನ ಹಮ್ಮಿಕೊಳ್ಳಲಾಗಿದೆ ಎಂದು ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ ತಿಳಿಸಿದ್ದಾರೆ.



ಈ ಕುರಿತು ಪ್ರಕಟಣೆ ನೀಡಿರುವ ಅವರು, ರಾಜ್ಯದಲ್ಲಿ ಸಿಎಂ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರಕಾರ ಪಂಚ ಗ್ಯಾರಂಟಿಗಳ ಅನುಷ್ಠಾನದಿಂದ ಗದಗ ತಾಲೂಕು, ಜಿಲ್ಲೆ ಸೇರಿ ರಾಜ್ಯಾದ್ಯಂತ ಬಡತನರೇಖೆಯಲ್ಲಿದ್ದ ಕುಟುಂಬಗಳನ್ನು ಆರ್ಥಿಕವಾಗಿ ಮೇಲೆತ್ತಲು ಸಹಕಾರಿಯಾಗಿದೆ. ಈಗಾಗಲೇ ಗದಗ ತಾಲೂಕಿನಲ್ಲಿ ಶೇ. 98ಕ್ಕೂ ಅಧಿಕ ಕುಟುಂಬಗಳು ಪಂಚ ಗ್ಯಾರಂಟಿ ಯೋಜನೆಗಳ ಫಲಾನುಭವಿಗಳಾಗಿದ್ದು, ಅರ್ಹ ಫಲಾನುಭವಿಗಳು ಯೋಜನೆಗಳನ್ನು ಸದುಪಯೋಗ ಪಡಿಸಿಕೊಂಡಿದ್ದಾರೆ.

ಈ ಹಿನ್ನೆಲೆಯಲ್ಲಿ ರೇಷನ್ ಕಾರ್ಡ್ ಹೆಸರು ಸೇರ್ಪಡೆ ಹಾಗೂ ತಿದ್ದುಪಡಿ, ಕುಟುಂಬದ ಸದಸ್ಯರ ಫೋಟೊ ಬದಲಾವಣೆ, ಕುಟುಂಬದ ಮುಖ್ಯಸ್ಥರ ಬದಲಾವಣೆ ಸೇರಿ ಗೃಹಲಕ್ಷ್ಮೀ, ಯುವನಿಧಿ, ಗೃಹಜ್ಯೋತಿ ಯೋಜನೆಯಡಿ ಹೊಸದಾಗಿ ಅರ್ಜಿ ಹಾಕಲಾಗುವುದು. ಇದುವರೆಗೆ ಪಂಚ ಗ್ಯಾರಂಟಿ ಯೋಜನೆಗಳ ಉಪಯೋಗ ಪಡೆಯದಿರುವ ಅರ್ಹ ಫಲಾನುಭವಿಗಳು ಅಗತ್ಯ ದಾಖಲೆಗಳನ್ನು ನೀಡಿ ಯೋಜನೆಗಳನ್ನು ಸುದಪಯೋಗಪಡಿಸಿಕೊಳ್ಳಬಹುದಾಗಿದೆ.

ಅರ್ಹ ಫಲಾನುಭವಿಗಳು ಮುಳಗುಂದ ನಾಕಾ ಬಳಿಯ ಕೆಎಸ್‌ಆರ್‌ಟಿಸಿ ಡಿಪೋ ಎದುರಿನ ಉಪವಿಭಾಗಾಧಿಕಾರಿ ಕಚೇರಿ ಆವರಣದಲ್ಲಿರುವ ಗದಗ ತಾಲೂಕು ಮಟ್ಟದ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಕಚೇರಿಗೆ ಜೂನ್ 14ರಂದು ಬೆಳಿಗ್ಗೆ 10ರಿಂದ ಸಂಜೆ 5ರೊಳಗಾಗಿ ಭೇಟಿ ನೀಡಬಹುದಾಗಿದೆ ಎಂದು ಪ್ರಾಧಿಕಾರದ ಅಧ್ಯಕ್ಷರಾದ ಅಶೋಕ ಮಂದಾಲಿ ತಿಳಿಸಿದ್ದಾರೆ.

### ರಾಷ್ಟ್ರಮಟ್ಟದ ಬಾಲಕ, ಬಾಲಕಿಯರ ಕುಸ್ತಿ ಪಂದ್ಯಾವಳಿ ಆಯ್ಕೆ ಪ್ರಕ್ರಿಯೆಗೆ ಚಾಲನೆ

## ಕ್ರೀಡಾ ಮನೋಭಾವನೆಯಿಂದ ಪಾಲ್ಗೊಳ್ಳಿ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಕುಸ್ತಿ ಸಂಘ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಗದಗ ಇವರ ಸಂಯುಕ್ತ ಆಶ್ರಯದಲ್ಲಿ 15 ವರ್ಷ ವಯೋಮಿತಿ ಒಳಗಿನ ರಾಷ್ಟ್ರಮಟ್ಟದ ಬಾಲಕ, ಬಾಲಕಿಯರ ಆಯ್ಕೆ ಕುಸ್ತಿ ಪಂದ್ಯಾವಳಿಯ ಉದ್ಘಾಟನಾ ಸಮಾರಂಭವು ನಗರದ ಕೆ.ಎಚ್. ಪಾಟೀಲ ಕ್ರೀಡಾಂಗಣದ ಕುಸ್ತಿ ಮನೆಯಲ್ಲಿ ನೆರವೇರಿತು.

ಕಾರ್ಯಕ್ರಮದ ಉದ್ಘಾಟನೆ ನೆರವೇರಿಸಿದ ಗದಗ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಕೃಷ್ಣಗೌಡ ಎಚ್.ಪಾಟೀಲ ಮಾತನಾಡಿ, ಗದಗ ಜಿಲ್ಲೆಯಲ್ಲಿ ರಾಷ್ಟ್ರಮಟ್ಟದ ಕುಸ್ತಿಪಟುಗಳ ಆಯ್ಕೆ ಪ್ರಕ್ರಿಯೆಯು ನಡೆಯುತ್ತಿರುವುದು ಜಿಲ್ಲೆಗೆ ಹೆಮ್ಮೆಯ ವಿಷಯವಾಗಿದೆ. ಈ ಆಯ್ಕೆ ಪ್ರಕ್ರಿಯೆಯಲ್ಲಿ ಕ್ರೀಡಾ ಮನೋಭಾವನೆಯಿಂದ ಭಾಗವಹಿಸಿ ತಮ್ಮ ಕ್ರೀಡೆಯನ್ನು ಪ್ರದರ್ಶಿಸಿ ಆಯ್ಕೆಗೆ ಶ್ರಮಿಸಬೇಕು. ಆಯ್ಕೆಯಾಗುವಲ್ಲಿ ವಿಫಲವಾದರೆ ನಿರಾಶರಾಗದೆ ಮತ್ತೆ ಪ್ರಯತ್ನ ಮಾಡಬೇಕೆಂದು ಕಿವಿಮಾತು ಹೇಳಿದರು. ಸಮಾರಂಭದ ಅಧ್ಯಕ್ಷತೆಯನ್ನು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಶರಣು ಗೋಗೇರಿ ವಹಿಸಿಕೊಂಡಿದ್ದರು. ಸಮಾರಂಭದಲ್ಲಿ ಗದಗ ಜಿಲ್ಲಾ ಕುಸ್ತಿ ತರಬೇತಿದಾರ ವಿನಾಯಕ ಯಂಕಂಚಿ, ಕುಸ್ತಿ ವ್ಯವಸ್ಥಾಪಕ ವಸಂತ ಪ.ಸಿದ್ದಮ್ಮನಹಳ್ಳಿ, ಅನಿಲ್ ಪ.ಸಿದ್ದಮ್ಮನಹಳ್ಳಿ, ಆದಪ್ಪ ಮಾರೆಪ್ಪ ಮಾರೆಪ್ಪನವರ, ಗಣಪತಿ ಭೋವಿ, ಪಾಂಡು ಜಾಧವ, ಸೋಮಪ್ಪ ಮೇಲ್ಮನಿ, ಬೀರಲಿಂಗೇಶ ಬಿಂಗಿ, ಬಾಲೆಸಾಬ ನದಾಫ್, ಬಸವರಾಜ ನವಲಗುಂದ, ಮಾಬುಸಾಬ ಹರಿವಾಣ, ಬಸವರಾಜ ಕರಿಮೇರಿ, ಸಿದ್ದಪ್ಪ ನಾಗೂರ, ಡಾ. ವಿನೋದ ಕುಮಾರ ಕೆ, ಅಂತಾರಾಷ್ಟ್ರೀಯ ಕುಸ್ತಿ ತರಬೇತುದಾರರು ಸೇರಿದಂತೆ ಕುಸ್ತಿಪಟುಗಳು ಪಾಲ್ಗೊಂಡಿದ್ದರು.



## ಸಂಪಾದಕೀಯ

# 11 ವರ್ಷಗಳು: ಭರವಸೆಗಳ ಬಲೆ, ವಾಸ್ತವದ ನೆಲೆ

ಕೇಂದ್ರದಲ್ಲಿ ಒಂದು ಸರ್ಕಾರ 11 ವರ್ಷಗಳ ಸುದೀರ್ಘ ಅವಧಿಯನ್ನು ಪೂರೈಸುವುದು ಪ್ರಜಾಪ್ರಭುತ್ವದಲ್ಲಿ ಒಂದು ಮಹತ್ವದ ಮೈಲಿಗಲ್ಲು. ಈ ಅವಧಿಯು ಸರ್ಕಾರಕ್ಕೆ ತನ್ನ ನೀತಿಗಳನ್ನು ಜಾರಿಗೊಳಿಸಲು, ಅಭಿವೃದ್ಧಿಯ ಹೊಸ ಪಥಗಳನ್ನು ನಿರ್ಮಿಸಲು ಮತ್ತು ದೇಶದ ಭವಿಷ್ಯಕ್ಕೆ ಭದ್ರ ಬುನಾದಿ ಹಾಕಲು ಸಾಕಷ್ಟು ಅವಕಾಶಗಳನ್ನು ಒದಗಿಸುತ್ತದೆ.

ಆದರೆ, ಈ 11 ವರ್ಷಗಳ ನಂತರವೂ ಜನಸಾಮಾನ್ಯರ ನಿರೀಕ್ಷೆಗಳು ಮತ್ತು ಸರ್ಕಾರದ ಭರವಸೆಗಳು ಎಷ್ಟರಮಟ್ಟಿಗೆ ಈಡೇರಿವೆ ಎಂಬುದು ಗಂಭೀರವಾಗಿ ಆತ್ಮಾವಲೋಕನ ಮಾಡಿಕೊಳ್ಳಬೇಕಾದ ವಿಷಯ. 2014 ರಲ್ಲಿ ಕೇಂದ್ರದಲ್ಲಿ ಅಧಿಕಾರಕ್ಕೆ ಬಂದ ಸರ್ಕಾರ, ಅಚ್ಛೇ ದಿನ್, ಭ್ರಷ್ಟಾಚಾರ ಮುಕ್ತ ಭಾರತ, ರೈತರ ಆದಾಯ ದುಪ್ಪಟ್ಟು ಮುಂತಾದ ಹಲವು ಆಕರ್ಷಕ ಭರವಸೆಗಳನ್ನು ನೀಡಿತ್ತು. ಈ ಭರವಸೆಗಳು ಕೋಟ್ಯಂತರ ಜನರ ಆಶಯಗಳಿಗೆ ರೆಕ್ಕೆ ಪುಕ್ಕ ಕಟ್ಟಿದವು. ದೇಶದ ಅಭಿವೃದ್ಧಿ ಪಥದಲ್ಲಿ ಕ್ರಾಂತಿಕಾರಿ ಬದಲಾವಣೆಗಳು ಆಗಲಿವೆ ಎಂಬ ನಿರೀಕ್ಷೆಗಳು ಗರಿಗೆದರಿದವು.

ಆದರೆ, 11 ವರ್ಷಗಳ ನಂತರ ವಾಸ್ತವದ ಚಿತ್ರಣ ಬೇರೆಯೇ ಇದೆ. ಆರ್ಥಿಕ ಅಸಮಾನತೆ ಹೆಚ್ಚಾಗಿದ್ದು, ನಿರುದ್ಯೋಗದ ಸಮಸ್ಯೆ ಉಲ್ಬಣಗೊಂಡಿದೆ. ಯುವಕರು ಉದ್ಯೋಗಾವಕಾಶಗಳ ಕೊರತೆಯಿಂದ ಕಂಗಾಲಾಗಿದ್ದಾರೆ. ಭ್ರಷ್ಟಾಚಾರ ಮುಕ್ತ ಭಾರತದ ಕನಸು ಇನ್ನೂ ಪೂರ್ಣವಾಗಿ ನನಸಾಗಿಲ್ಲ. ರೈತರ ಆದಾಯ ದುಪ್ಪಟ್ಟುಗೊಳಿಸುವ ಭರವಸೆ ಕೇವಲ ಭರವಸೆಯಾಗಿಯೇ ಉಳಿದಿದೆ. ಕೃಷಿ ಕ್ಷೇತ್ರ ಇನ್ನೂ ಸವಾಲುಗಳನ್ನು ಎದುರಿಸುತ್ತಿದೆ. ಇಂಧನ ಬೆಲೆಗಳ ಏರಿಕೆ, ಅಗತ್ಯ ವಸ್ತುಗಳ ಬೆಲೆ ಏರಿಕೆ ಸಾಮಾನ್ಯ ಜನರ ಬದುಕನ್ನು ದುಸ್ತರವಾಗಿಸಿದೆ. ಗ್ರಾಮೀಣ ಪ್ರದೇಶಗಳಲ್ಲಿ ಮೂಲಸೌಕರ್ಯಗಳ ಕೊರತೆ, ಶಿಕ್ಷಣ ಮತ್ತು ಆರೋಗ್ಯ ಕ್ಷೇತ್ರಗಳಲ್ಲಿನ ಸವಾಲುಗಳು ಇನ್ನೂ ಹಾಗೆಯೇ ಇವೆ. ಪ್ರಜಾಪ್ರಭುತ್ವದ ಆಧಾರ ಸ್ತಂಭಗಳಾದ ಸ್ವಾಯತ್ತ ಸಂಸ್ಥೆಗಳ ಮೇಲೆ ಒತ್ತಡ ಹೆಚ್ಚಾಗುತ್ತಿರುವ ಕುರಿತು ಆತಂಕಗಳು ವ್ಯಕ್ತವಾಗಿವೆ. ಪ್ರಜಾಪ್ರಭುತ್ವದಲ್ಲಿ ಜನರು ತಮ್ಮ ಹಕ್ಕುಗಳನ್ನು ಪ್ರಶ್ನಿಸುವ ಮತ್ತು ಉತ್ತರದಾಯಿತ್ವವನ್ನು ಬಯಸುವ ಅಧಿಕಾರ ಹೊಂದಿರುತ್ತಾರೆ. ಈ 11 ವರ್ಷಗಳ ನಂತರ, ಸರ್ಕಾರವು ತನ್ನ ಭರವಸೆಗಳನ್ನು ಈಡೇರಿಸಲು ಯಾವ ಕ್ರಮಗಳನ್ನು ಕೈಗೊಂಡಿದೆ ಮತ್ತು ಅವುಗಳ ಫಲಿತಾಂಶಗಳೇನು ಎಂಬುದನ್ನು ಜನರಿಗೆ ಸ್ಪಷ್ಟಪಡಿಸಬೇಕು. ಕೇವಲ ಹಿಂದಿನ ಸರ್ಕಾರಗಳ ವೈಫಲ್ಯಗಳನ್ನು ದೂಷಿಸುತ್ತಾ ಕಾಲ ಕಳೆಯುವ ಬದಲು, ಈಗಿನ ಸಮಸ್ಯೆಗಳಿಗೆ ವಾಸ್ತವಿಕ ಪರಿಹಾರಗಳನ್ನು ಕಂಡುಕೊಳ್ಳುವುದು ಸರ್ಕಾರದ ಕರ್ತವ್ಯ. ಮುಂದಿನ ದಿನಗಳಲ್ಲಾದರೂ, ಸರ್ಕಾರವು ತನ್ನ ಭರವಸೆಗಳನ್ನು ಗಂಭೀರವಾಗಿ ಪರಿಗಣಿಸಿ, ಜನಸಾಮಾನ್ಯರ ಬದುಕಿನಲ್ಲಿ ಸಕಾರಾತ್ಮಕ ಬದಲಾವಣೆ ತರುವತ್ತ ಕಾರ್ಯೋನ್ಮುಖವಾಗಬೇಕು. ಇಲ್ಲವಾದರೆ, ಜನರು ತಮ್ಮ ಮುಂದಿನ ತೀರ್ಪನ್ನು ನೀಡಲು ಸಿದ್ಧರಾಗಿರುತ್ತಾರೆ ಎಂಬುದನ್ನು ಮರೆಯಬಾರದು.

## ಕವನ

# ರೈತ ಲೀಲೆ

ಪ್ರಕೃತಿಯ ಮಡಿಲಿನ ಕೂಸು
ಅರುಣೋದಯದೊಂದಿಗೆ ಕಾಯಕದ ರೇಸು
ಪೋಸಷಿಸುವವನು ಎತ್ತು, ಎಮ್ಮೆ, ಕರು, ಹಸು
ಅವಿಭಕ್ತ ಕುಟುಂಬದಲ್ಲಿ ರೈತರು ವಾಸು (1)

ಭೂತಾಯಿಯನ್ನು ನೆನೆದು ಎದ್ದು
ನಿರಂತರ ಕ್ರಿಯಾಶೀಲವೇ ಆರೋಗ್ಯದ ಮದ್ದು
ಪಶುಪಾಲನೆಯೊಂದಿಗೆ ಮಡದಿ ಮಕ್ಕಳ ಮುದ್ದು
ನೀ ಮಾದರಿ ಆಗಿರುವೆ ಇಡೀ ಜಗತ್ತನ್ನು ಗೆದ್ದು (2)

ಫಲವೇನು ಬಯಸದೆ ಬೆವರು ಸುರಿಸಿ
ಹಾಲು, ಮೊಸರು, ಮಜ್ಜಿಗೆ, ತುಪ್ಪ ಉಣಿಸಿ
ಸುತ್ತಮುತ್ತ ಗಿಡ ಮರ ಬಳ್ಳಿಗಳನು ಬೆಳೆಸಿ
ಋತುಮಾನಕ್ಕೆ ಅನುಗುಣವಾಗಿ ದೇಹವನ್ನು ದಣಿಸಿ (3)

ತಲೆಮಾರುಗಳಿಂದ ಸಾಗಿ ಬಂದ ಈ ಕಲೆ
ಸಹಸ್ರಾರು ಜೀವರಾಶಿಗೆ ಆಗಿದೆ ನೆಲೆ
ಮಣ್ಣಿನ ಮಕ್ಕಳಿಗೆ ಸಿಗಲಿ ಮೌಲ್ಯವಾದ ಬೆಲೆ
ತಮ್ಮ ಕಾಯಕದಲ್ಲಿ ಕಾಣುವರು ಆ ದೇವರ ಲೀಲೆ (4)

ಯುವಶಕ್ತಿಗೆ ಅರಿವಾಗಲಿ ನೇಗಿಲ ಶ್ರಮ
ಕೋಟಿವಿದ್ಯೆಗಿಂತ ಮೇಲು ಈ ಮೇಟಿಯ ಮರ್ಮ
ಈ ಮಣ್ಣಿನಲ್ಲಿ ಮಣ್ಣಾಗುವುದು ಸರ್ವರ ಜನ್ಮ
ನಿತ್ಯ ಕಾಯಕಯೋಗಿಗೆ ಸಿಗಲಿ
ಹೆಮ್ಮೆಯ ಅಭಿಮಾನ ಗೌರವದ ಸನ್ಮಾನ (5)

–ಸುವರ್ಣ ಮಾಳಗಿಮನಿ (ಬಸುಮಾ).
ಬಂಕಾಪುರ, ಶಿಗ್ಗಾವಿ.

**ಜೂನ್ 11ರಂದು ಅವ್ವನನ್ನು ಕುರಿತು ವಿಶೇಷ ಶಿವಾನುಭವ, ಪ್ರತಿಭಾ ಪುರಸ್ಕಾರದ ನಿಮಿತ್ತ ಲೇಖನ**

# ಸಮಾಜ ಸೇವೆಯೇ ಪರಮ ಧ್ಯೇಯ

ಅವ್ವ ಸೇವಾ ಟ್ರಸ್ಟ್ ಹಾಗೂ ಅನ್ನದಾನೀಶ್ವರ ವಿದ್ಯಾ ಸಮಿತಿ ಸಹಯೋಗದಲ್ಲಿ ಜೂನ್ 11ರಂದು ಮುಂಡರಗಿಯ ಅನ್ನದಾನೀಶ್ವರ ಕಲ್ಯಾಣ ಮಂಟಪದಲ್ಲಿ ಅವ್ವನನ್ನು ಕುರಿತು ವಿಶೇಷ ಶಿವಾನುಭವ ಹಾಗೂ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪುರಸ್ಕಾರ ಕಾರ್ಯಕ್ರಮ ಶ್ರೀಗಳ ಹಾಗೂ ಗಣ್ಯಮಾನ್ಯರ ಸಮ್ಮುಖದಲ್ಲಿ ಜರುಗಲಿದೆ. ಈ ಕಾರ್ಯಕ್ರಮವನ್ನು ಆಯೋಜಿಸಿದ ಪ್ರಮುಖ ಎರಡು ಸಂಸ್ಥೆಗಳು ನಡೆದು ಬಂದದಾರಿಯನ್ನು ಮೆಲುಕು ಹಾಕೋಣ.



ವಿಧಾನ ಪರಿಷತ್ತಿನ ಸಭಾಪತಿಗಳಾದ ಬಸವರಾಜ ಹೊರಟ್ಟಿ ಅವರು ತಮ್ಮ ತಾಯಿ ಗುರವ್ವ ಶಿವಲಿಂಗಪ್ಪ ಹೊರಟ್ಟಿ ಸ್ಮರಣಾರ್ಥ ಸಮಾಜಮುಖಿ ಸೇವೆ ಸಲ್ಲಿಸಲು 'ಅವ್ವ ಸೇವಾ ಟ್ರಸ್ಟ್'ನ್ನು 2011ರಲ್ಲಿ ಪ್ರಾರಂಭಿಸಿದರು. ಅವ್ವನ ಹೆಸರಿನಲ್ಲಿ ಸಮಾಜಸೇವೆಗೆ ಸಮರ್ಪಿಸಿಕೊಂಡ ಈ ಸಂಸ್ಥೆ ದಶಕಗಳಿಂದ ವಿಧಾಯಕ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಅನೇಕರ ಬಾಳಿಗೆ ಬೆಳಕಾಗಿದೆ.

ಕೋಟ್ಯಾಂತರ ಬೆಲೆಬಾಳುವ ತಮ್ಮ 7 ಎಕರೆ ಜಮೀನನ್ನು ಸರಕಾರಿ ಶಾಲೆಗೆ ನೀಡಿ ಅವ್ವ ಸೇವಾ ಟ್ರಸ್ಟ್ ಹಾಗೂ ವಿವಿಧ ದಾನಿಗಳಿಂದ, ಸರಕಾರದಿಂದ ನೆರವು ಪಡೆದು 35 ಕೋಟಿಗೂ ಹೆಚ್ಚು ವೆಚ್ಚದಲ್ಲಿ ಹುಟ್ಟೂರಾದ ಯಡಹಳ್ಳಿಯಲ್ಲಿ ದೇಶದಲ್ಲಿಯೇ ಮಾದರಿಯಾದ ಹೈಟೆಕ್ ಶಾಲೆನ್ನು ನಿರ್ಮಿಸಿ ಅಕ್ಷರ ದಾಸೋಹದಲ್ಲಿ ತೊಡಗಿಕೊಂಡು ಸಾವಿರಾರು ವಿದ್ಯಾರ್ಥಿಗಳಿಗೆ ಅನುಕೂಲ ಮಾಡಿದ್ದಾರೆ. ಹುಟ್ಟೂರಿಗೆ ಹಲವಾರು ಮೂಲಭೂತ ಸೌಕರ್ಯ ಕಲ್ಪಿಸಿ ಹುಟ್ಟೂರಿನ ಋಣ ತೀರಿಸಿದ್ದಾರೆ. ನಾಡಿನ 100ಕ್ಕೂ ಅಧಿಕ ದಿವ್ಯಾಂಗರಿಗೆ ಟ್ರೈಸಿಕಲ್ ನೀಡಿ ಆಸರೆ ಕಲ್ಪಿಸಿದೆ. ಸಮಾಜಸೇವೆಯ ಜೊತೆಗೆ ಇತರೆ ಕ್ಷೇತ್ರಗಳಲ್ಲಿ ಅಪ್ರತಿಮ ಸೇವೆ ಮಾಡಿದ ಸಾಧಕರಿಗೆ 'ಅವ್ವ' ಪ್ರಶಸ್ತಿ ನೀಡಿ ಗೌರವಿಸಿದೆ. ಧಾರವಾಡ ಜಿಲ್ಲೆಯಲ್ಲಿ 1000ಕ್ಕೂ ಅಧಿಕ ಸಸಿಗಳನ್ನು ವಿತರಿಸಿ ಪರಿಸರ ಸಂರಕ್ಷಣೆಗೆ ಅಳಿಲು ಸೇವೆ ಸಲ್ಲಿಸಿದೆ. ಬೆಳಗಾವಿ ವಿಭಾಗದ 48 ಜನ ಪ್ರತಿಭಾವಂತ ಅಂಧ, ವಿಕಲಚೇತನ ವಿದ್ಯಾರ್ಥಿಗಳಿಗೆ ಧನಸಹಾಯ ಮಾಡಿದೆ. 80 ಜನ ಹಿರಿಯ ತಾಯಿಂದಿರಿಗೆ ಗೌರವ ಸಂಮಾನ ಮಾಡಿದೆ. ಅನಾರೋಗ್ಯ ಪೀಡಿತ ಕುಟುಂಬದ ಮಕ್ಕಳಿಗೆ ಆಸರೆಯಾಗಿದೆ.

ಇಂತಹ ಹತ್ತು ಹಲವಾರು ಕಾರ್ಯಕ್ರಮಗಳ ಮೂಲಕ ನೊಂದವರಿಗೆ, ಪ್ರತಿಭಾವಂತರಿಗೆ, ಸಾಧಕರಿಗೆ 'ಅವ್ವ ಸೇವಾ ಟ್ರಸ್ಟ್' ನೆರವಿನ ಹಸ್ತ ಚಾಚಿದೆ. ಜಗದ್ಗುರು ಶ್ರೀ ಅನ್ನದಾನೀಶ್ವರ ಸಂಸ್ಥಾನಮಠ ಮುಂಡರಗಿ ಇಲ್ಲಿಯ ಶಿವಾನುಭವ ಸೇವಾ ಸಮಿತಿ ಸಂಘದಲ್ಲಿ 1 ಲಕ್ಷ 25 ಸಾವಿರ ರೂ.ಗಳ ದತ್ತಿನಿಧಿ ಸ್ಥಾಪಿಸಿ ಪ್ರತಿವರ್ಷ ಅವ್ವನ ಹೆಸರಿನಲ್ಲಿ ಜನಪರ ಕಾರ್ಯಕ್ರಮವನ್ನು ಆಯೋಜಿಸಲು ಅವಕಾಶ ಕಲ್ಪಿಸಿದ್ದಾರೆ. ಉಪನ್ಯಾಸ, ಸಂಮಾನ, ಹೆತ್ತವರ ಕುರಿತು ಚಿಂತನ–ಮಂಥನ ಕಾರ್ಯಕ್ರಮ ಈ ಬಾರಿಯ ಶಿವಾನುಭವದಲ್ಲಿ ಜರುಗಲಿದೆ.

ಮುಂಡರಗಿಯ ಅನ್ನದಾನೀಶ್ವರ ವಿದ್ಯಾ ಸಮಿತಿ 100 ವರ್ಷಗಳನ್ನು ಪೂರೈಸಿ ಶತಮಾನೋತ್ಸವದ ಸಂಭ್ರಮಕ್ಕಾಗಿ ಸಜ್ಜಾಗಿ ಸಕಲ ಸಿದ್ಧತೆಯಲ್ಲಿ ತೊಡಗಿದ್ದು, ಈ ಭಾಗದ ಶಿಕ್ಷಣ ಪ್ರೇಮಿಗಳಿಗೆ ಅಭಿಮಾನ ಹಾಗೂ ಹೆಮ್ಮೆಯ ಸಂಗತಿ. ಮುಂಡರಗಿ ಅಂದಾಕ್ಷಣ ಬರದ ನಾಡು, ಹಿಂದುಳಿದ ಪ್ರದೇಶವೆಂಬ ಮಾತು ಎಲ್ಲೆಡೆ ಇದೆ. ಇಂತಹ ಪ್ರದೇಶದಲ್ಲಿ ಯಾವುದೇ ಫಲಾಪೇಕ್ಷೆಯಿಲ್ಲದೇ ಸ್ವಾತಂತ್ರ್ಯಪೂರ್ವದಲ್ಲಿಯೇ ಮೃಡಗಿರಿ ಅನ್ನದಾನೀಶ್ವರ ವಿದ್ಯಾ ಸಂಸ್ಥೆ ಆ ಭಾಗದ ವಿದ್ಯಾರ್ಥಿಗಳಿಗೆ ಅನ್ನ, ಅಕ್ಷರ, ಆಸರೆ, ಅರಿವು ಮೂಡಿಸುವ ಕೈಂಕರ್ಯದಲ್ಲಿ ತೊಡಗಿದೆ.

1912ರಲ್ಲಿ ಸಂಸ್ಕೃತ ಪಾಠಶಾಲೆ ಹಾಗೂ ಉಚಿತ ಪ್ರಸಾದ ನಿಲಯವನ್ನು ಸ್ಥಾಪಿಸಿ, ಆ ಭಾಗದ ವಿದ್ಯಾರ್ಥಿಗಳಿಗೆ ಅನುಕೂಲ ಕಲ್ಪಿಸಿತು. 1924ರಲ್ಲಿ ನ್ಯೂ ಇಂಗ್ಲೀಷ್ ಶಾಲೆ 12 ವಿದ್ಯಾರ್ಥಿಗಳೊಂದಿಗೆ ಆರಂಭವಾಯಿತು. 1926ರಲ್ಲಿ 9ನೇ ಪೀಠಾಧೀಶರಾದ ವೆಂಕಟಾಪೂರ ಅಜ್ಜನವರು ಶಿಕ್ಷಣದ ಅಭಿವೃದ್ಧಿಗಾಗಿ ಸಾಕಷ್ಟು ಶ್ರಮಿಸಿದರು. ಇವರಿಗೆ ಹಿರಿಯರು, ಶಿಕ್ಷಣ ಪ್ರೇಮಿಗಳಾದ ಕೊಪ್ಪಳದ ವೀರಭದ್ರಪ್ಪನವರು, ಭೂದಾನಿಗಳಾದ ಇಲ್ಲೂರು ವಾಸಪ್ಪನವರು ಹಾಗೂ ಶ್ರೀಮಠದ ಅಪಾರ ಭಕ್ತಸಮೂಹ ಪ್ರಸ್ತುತ ಪೀಠಾಧೀಶರಾದ ಅನ್ನದಾನೀಶ್ವರ ಶ್ರೀಗಳ ಸನ್ನಿಧಿಗೆ ಶಿಕ್ಷಣ ಸಂಸ್ಥೆಯನ್ನು ಸಮರ್ಪಿಸಿದರು.



ಸಂಸ್ಥೆಯ ವತಿಯಿಂದ ಮೊದಲ ಪ್ರೌಢಶಾಲೆ 1948ರಲ್ಲಿ ಆರಂಭವಾಯಿತು. ವೆಂಕಟಾಪೂರ ಅಜ್ಜನವರ ಆರ್ಥಿಕ ಸಹಾಯದಿಂದ ಆರಂಭವಾದ ಈ ಶಾಲೆಗೆ ಅಂದಿನ ಮುಖ್ಯಮಂತ್ರಿಗಳಾದ ಎಸ್. ನಿಜಲಿಂಗಪ್ಪನವರು ಅಡಿಗಲ್ಲು ಹಾಕಿದರು. 1949ರಲ್ಲಿ ಪೂರ್ಣಗೊಂಡ ಕಟ್ಟಡವನ್ನು ಅಂದಿನ ರಾಜ್ಯಪಾಲರಾದ ಜಯಚಾಮರಾಜೇಂದ್ರ ಒಡೆಯರಿಂದ ಉದ್ಘಾಟಿಸಲಾಯಿತು.

1965ರಿಂದ ಇಂದಿನವರೆಗೂ 33 ಅಂಗ ಸಂಸ್ಥೆಗಳು ನಡೆಯುತ್ತಿದ್ದು, ಎಲ್ಲವೂ ಗ್ರಾಮೀಣ ಭಾಗದ ವಿದ್ಯಾರ್ಥಿಗಳನ್ನೇ ಕೇಂದ್ರವಾಗಿಟ್ಟುಕೊಂಡು ಗ್ರಾಮೀಣ ಪ್ರದೇಶದಲ್ಲಿ ಸೇವಾ ಕೈಂಕರ್ಯದಲ್ಲಿ ತೊಡಗಿರುವುದು ಈ ಸಂಸ್ಥೆಯ ವಿಶೇಷ ಹಾಗೂ ಗ್ರಾಮೀಣ ಜನತೆಯ ಬಗ್ಗೆ ಇರುವ ಕಳಕಳಿ ಹಾಗೂ ಕಾಳಜಿ.

ಪ್ರಸ್ತುತ ಪೂಜ್ಯರು 160ಕ್ಕೂ ಹೆಚ್ಚು ವಿವಿಧ ಪ್ರಕಾರದ ಸಾಹಿತ್ಯ ರಚಿಸಿದ್ದಾರೆ. ಅಲ್ಲದೇ 270ಕ್ಕೂ ಹೆಚ್ಚು ಗ್ರಂಥಗಳು ಮುದ್ರಣಗೊಳ್ಳಲು ಸಹಾಯ ಕಲ್ಪಿಸಿ ಬರಹಗಾರರು ಹಾಗೂ ಸಾಹಿತಿಗಳಿಗೆ ಬೆನ್ನು ತಟ್ಟಿದ್ದಾರೆ. ಜೊತೆ–ಗೆ ನಾಡಿನ ಜನಪ್ರಿಯ ಪತ್ರಿಕೆಗಳಿಗೆ ಚಿಂತನ–ಮಂಥನ ಲೇಖನಗಳನ್ನು ಬರೆಯುವುದರ ಮೂಲಕ, ಜನರನ್ನು ಹಾಗೂ ಸಮಾಜವನ್ನು ತಿದ್ದಿ–ತೀಡುವ ಕೆಲಸದಲ್ಲಿ ತೊಡಗಿದ್ದಾರೆ. ತಮ್ಮ 84ನೇ ವಯಸ್ಸಿನಲ್ಲಿಯೂ ಸದಾ ಕ್ರಿಯಾಶೀಲರಾಗಿ ಶ್ರೀಮಠದ ಸೇವಾ ಕೈಂಕರ್ಯಗಳನ್ನು ಸ್ವತಃ ವೀಕ್ಷಿಸಿ ಮಾರ್ಗದರ್ಶನ ಮಾಡುವ ಮೂಲಕ ಅತ್ಯಂತ ಅಚ್ಚುಕಟ್ಟಿನಿಂದ ನಡೆಸಿಕೊಂಡು ಹೋಗುತ್ತಿದ್ದಾರೆ. ಪೂಜ್ಯರಿಗೆ ಈಗಾಗಲೇ ಕರ್ನಾಟಕ ವಿಶ್ವವಿದ್ಯಾಲಯ ಡಾಕ್ಟರೇಟ್ ಪದವಿ ನೀಡಿದೆ. ಹಂಪಿ ವಿಶ್ವವಿದ್ಯಾಲಯ ನಾಡೋಜ ಪ್ರಶಸ್ತಿ ನೀಡುವುದರ ಮೂಲಕ ಎರಡು ವಿಶ್ವವಿದ್ಯಾಲಯಗಳು ತಮ್ಮ ಗೌರವಗಳನ್ನ ಹೆಚ್ಚಿಸಿಕೊಂಡಿವೆ. ಪ್ರತಿನಿತ್ಯ ಪೂಜೆ, ಅಧ್ಯಯನ, ಬರವಣಿಗೆ, ಓದನ್ನು ನಿಲ್ಲಿಸದ ಪೂಜ್ಯರು, ದಿನದ 16 ಗಂಟೆಗೂ ಹೆಚ್ಚು ಕಾಲ ಕೆಲಸ–ಕಾರ್ಯಗಳನ್ನು ಮಾಡುವುದರ ಮೂಲಕ ಯುವಕರಿಗೆ ಸ್ಫೂರ್ತಿಯಾಗಿದ್ದಾರೆ. ಇಂಥಾ ಪೂಜ್ಯರು ನಮ್ಮೆಲ್ಲರ ಮಧ್ಯೆ ಇರುವದೇ ನಮ್ಮೆಲ್ಲರ ಸೌಭಾಗ್ಯ.

–ಎಮ್.ಎಚ್. ಪೂಜಾರ
ಮುಖ್ಯೋಪಾಧ್ಯಾಯರು,
ಅನ್ನದಾನೀಶ್ವರ ಪ್ರೌಢಶಾಲೆ
ನರಸಾಪೂರ.

# ಶ್ರದ್ಧಾ–ಭಕ್ತಿಯಿಂದ ಬಕ್ರೀದ್ ಆಚರಣೆ



■ ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ತ್ಯಾಗ ಮತ್ತು ಬಲಿದಾನಗಳ ಸಂಕೇತವಾದ ಬಕ್ರೀದ್ ಹಬ್ಬವನ್ನು ಮುಸ್ಲಿಂ ಬಾಧವರು ಶನಿವಾರ ತಾಲೂಕಿನಾದ್ಯಂತ ಶ್ರದ್ಧಾ–ಭಕ್ತಿಯಿಂದ ಆಚರಿಸಿದರು.

ಹರಪನಹಳ್ಳಿ ಪಟ್ಟಣದ ಹಡಗಲಿ ರಸ್ತೆ ಹಾಗೂ ಹೊಸಪೇಟೆ ರಸ್ತೆಯ ದರ್ಗಾಗಳಲ್ಲಿ ಮಹಿಳೆಯರು ಸೇರಿದಂತೆ ಶನಿವಾರ ಬೆಳಿಗ್ಗೆ ಮುಸ್ಲಿಂ ಬಾಂಧವರು ಸಾಮೂಹಿಕ ಪ್ರಾರ್ಥನೆ ಸಲ್ಲಿಸಿ, ಸಕಲ ಜೀವರಾಶಿಗಳಿಗೆ ಒಳಿತಾಗುವಂತೆ ದೇವರಿಗೆ ಮೊರೆಯಿಟ್ಟರು.

ಪಟ್ಟಣ ಸೇರಿದಂತೆ ಅರಸೀಕೆರೆ, ಕುಂಚೂರು, ಶೃಂಗಾರತೋಟ, ಉಚ್ಚಂಗಿದುರ್ಗ, ಹಾರಕನಾಳು, ಹುಲಿಕಟ್ಟಿ, ರಾಮನಗರ, ಹನುಮನಹಳ್ಳಿ, ತೆಲಿಗಿ, ಶಿಂಗ್ರಹಳ್ಳಿ, ನಂದಿಬೇವೂರು, ಕಾನಹಳ್ಳಿ, ಕಡಕೋಳ, ಕುಣೇಮಾದಿಹಳ್ಳಿ, ಹೊಸಕೋಟಿ, ಮಾದಿಹಳ್ಳಿ, ಸೇರಿದಂತೆ ಹಲವು ಗ್ರಾಮಗಳಲ್ಲಿ ಬಕ್ರೀದ್ ಹಬ್ಬವನ್ನು ಆಚರಿಸಲಾಯಿತು.

ಈ ವೇಳೆ ಅಂಜುಮನ್ ಸಮಿತಿ ಅಧ್ಯಕ್ಷ ನೂರ್ ಅಹ್ಮದ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಎಂ.ವಿ. ಅಂಜಿನಪ್ಪ, ಪುರಸಭೆ ಸದಸ್ಯ ಜಾಕೀರ್ ಸರ್ಕಾವಸ್, ಜಾಯೀದ್, ಎಲ್ ಮಂಜ್ಯಾನಾಯ್ಕ, ಶಿಕ್ಷಕ ಸಲಾಂ ಸಾಹೇಬ್, ಬಡಗಿ ರೆಹಮ್ ಉಲ್ಲಾ ಸೇರಿದಂತೆ ಇತರರು ಭಾಗವಹಿಸಿದ್ದರು.

# ಅನುಮಾನಾಸ್ಪದವಾಗಿ ಯುವಕನ ಶವ ಪತ್ತೆ: ಫ್ಲೈಓವರ್ ಮೇಲಿಂದ ಬಿದ್ದು ಸಾವನ್ನಪ್ಪಿರುವ ಶಂಕೆ!

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಏರ್‌ಪೋರ್ಟ್ ರೋಡ್‌ನ ಮಾಲ್ ಆಫ್ ಏಷ್ಯಾ ಮುಂಭಾಗದ ರಸ್ತೆಯಲ್ಲಿ ಅನುಮಾನಾಸ್ಪದ ರೀತಿಯಲ್ಲಿ ಯುವಕನ ಶವ ಪತ್ತೆಯಾಗಿರುವ ಘಟನೆ ಜರುಗಿದೆ.

ಫ್ಲೈಓವರ್ ಮೇಲಿಂದ ಬಿದ್ದು ಯುವಕ ಸಾವನ್ನಪ್ಪಿರುವ ಶಂಕೆ ವ್ಯಕ್ತವಾಗಿದೆ. 22 ವರ್ಷದ ಮುನಿರಾಜ್ ಮೃತ ಯುವಕ. ಹೆಬ್ಬಾಳದ ಶಿವಶಂಕರ್ ಲೇಔಟ್ ನಿವಾಸಿಯಾಗಿರುವ ಮುನಿರಾಜ್, ಖಾಸಗಿ ಕಂಪನಿಯಲ್ಲಿ ಅಕೌಂಟೆಂಟ್ ಆಗಿ ಕೆಲಸ ಮಾಡುತ್ತಿದ್ದ. ಭಾನುವಾರ ತನ್ನ ತಾಯಿಗೆ ಸ್ನೇಹಿತರನ್ನು ಭೇಟಿಯಾಗಿ ಬರುತ್ತೇನೆಂದು ಹೇಳಿ ಹೊರಟಿದ್ದ. ಫ್ಲೈಓವರ್ ಮೇಲೆ ಬೈಕ್ ನಿಲ್ಲಿಸಿ ಬಳಿಕ ಮೇಲಿಂದ ಬಿದ್ದು ಆತ್ಮಹತ್ಯೆ ಮಾಡಿಕೊಂಡಿರುವ ಶಂಕೆ ಉಂಟಾಗಿದೆ. ಫ್ಲೈಓವರ್ ಕೆಳಭಾಗದ ರಸ್ತೆಯಲ್ಲಿ ಯುವಕನ ಶವ ಬಿದ್ದಿದ್ದನ್ನು ಕಂಡ ಸ್ಥಳೀಯರು ಕೂಡಲೇ ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ಇತ್ತ ತಡರಾತ್ರಿಯಾದರೂ ಮಗ ಮನೆಗೆ ಬಂದಿಲ್ಲ ಎಂದು ತಾಯಿ ಒಂದೇ ಸಮನೇ ಕರೆ ಮಾಡಿದ್ದು, ಪೊಲೀಸರು ಮಗ ಸಾವನ್ನಪ್ಪಿರುವ ಕುರಿತು ಮಾಹಿತಿ ನೀಡಿದ್ದಾರೆ. ಸದ್ಯ ಈ ಕುರಿತು ಪೊಲೀಸರು ಹೆದ್ದಾರಿಯ ಸಿಸಿಟಿವಿಗಳ ಪರಿಶೀಲನೆ ನಡೆಸುತ್ತಿದ್ದು, ಸಾವನ್ನಪ್ಪಿದ್ದು ಹೇಗೆ ಎಂದು ತನಿಖೆಯಲ್ಲಿ ಹೊರಬರಬೇಕಿದೆ.

# ರಾಷ್ಟ್ರಮಟ್ಟದ ಯೋಗ ಸ್ಪರ್ಧೆಗೆ ಆಯ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ಬ ಂ ಗ ಳ ೂ ರ ಿ ನ ಲ್ಲಿ ಸಾರ್ವಜನಿಕ ಶಿಕ್ಷಣ ಇಲಾಖೆ ಆಯೋಜಿಸಿದ್ದ 2025–26ನೇ ಸಾಲಿನ ರಾಜ್ಯಮಟ್ಟದ ಯೋಗ ಒಲಂಪಿಯಾಡ್ ಸ್ಪರ್ಧೆಯಲ್ಲಿ ಗದಗ ತಾಲೂಕಿನ ಕದಾಂಪುರದ ಸರ್ಕಾರಿ ಪ್ರೌಢಶಾಲೆಯ 8ನೇ ತರಗತಿಯ ವಿದ್ಯಾರ್ಥಿ ಹಾಗೂ ಪಾಪನಾಶಿಯ ಆಯುಷ್, ಆರೋಗ್ಯ ಮಂದಿರದ ಯೋಗಪಟು ಪೂರ್ಣಿಮ ಕಟಿಗ್ಗಾರ ಹಾಗೂ ಅಂತೂತ ಬೆಂತೂರಿನ ಹಿರಿಯ ಪ್ರಾಥಮಿಕ ಶಾಲೆಯ ವಿದ್ಯಾರ್ಥಿ ವಿನಯಕುಮಾರ ಆಲೂರು ಭಾಗವಹಿಸಿ ಜೂನ್ 15ರಿಂದ 18ರವರೆಗೆ ಕನ್ಯಾಕುಮಾರಿಯಲ್ಲಿ





ನಡೆಯುವ ರಾಷ್ಟ್ರಮಟ್ಟದ ಯೋಗ ಸ್ಪರ್ಧೆಗೆ ಆಯ್ಕೆಯಾಗಿದ್ದಾರೆ.

ಗದಗ ಜಿಲ್ಲೆಗೆ, ಪಾಪನಾಶಿ, ಕದಾಂಪುರ ಹಾಗೂ ಅಂತೂರ–ಬೆಂತುರ ಗ್ರಾಮಕ್ಕೆ ಕೀರ್ತಿ ತಂದಿರುವ ಸಾಧಕ ಯೋಗ ಪಟುಗಳಿಗೆ ಊರಿನ ಹಿರಿಯರು, ಜಿಲ್ಲಾ ಆಯುಷ್ ಅಧಿಕಾರಿ ಜಯಪಾಲ ಸಾಮುದ್ರೆಕರ, ವೈದ್ಯಾಧಿಕಾರಿಗಳಾದ ಡಾ. ಅಶೋಕ ಮತ್ತಿಗಟ್ಟಿ, ಯೋಗ 'ಶಿಕ್ಷಕಿ ಸುಧಾ ಪಾಟೀಲ, ಚೇತನ್ ಚುಂಚಾ ಮುಂತಾದವರು ಅಭಿನಂದಿಸಿದ್ದಾರೆ.

# ಮಳೆ ಅವಾಂತರ: ಮೇಲ್ಛಾವಣಿ ಕುಸಿದು ಮಹಿಳೆ ಸಾವು!

■ ವಿಜಯಸಾಕ್ಷಿ ಸುದ್ದಿ, ವಿಜಯಪುರ

ನಗರದಲ್ಲಿ ಸುರಿದ ಭಾರೀ ಗಾಳಿ–ಮಳೆಗೆ ಅವಾಂತರ ಸೃಷ್ಟಿ ಆಗಿದೆ. ಅದರಂತೆ ಜಿಲ್ಲೆಯ ತಿಕೋಟಾ ತಾಲೂಕಿನ ಬಾಬಾನಗರದಲ್ಲಿ ರಾತ್ರಿಯಿಡಿ ಸುರಿದ ಭಾರೀ ಗಾಳಿ–ಮಳೆಗೆ ಮೇಲ್ಛಾವಣಿ ಕುಸಿದು ಗೃಹಿಣಿ ಸಾವನ್ನಪ್ಪಿರುವ ಘಟನೆ ಜರುಗಿದೆ.

ಸಂಗೀತಾ(30) ಮೃತ ಮಹಿಳೆ. ಭಾನುವಾರ ತಡರಾತ್ರಿ ಮನೆಯಲ್ಲಿ



ಮಲಗಿದ್ದಾಗ ಅವಘಡ ಸಂಭವಿಸಿದೆ. ಮಳೆಯಿಂದಾಗಿ ಮನೆ ಸೋರುತ್ತಿದ್ದ ವೇಳೆ ಮನೆಯಿಂದ ಎದ್ದು ಹೊರ ಬಂದು ಪತಿ ಹಾಗೂ ಮಕ್ಕಳು ಅಪಾಯದಿಂದ ಪಾರಾಗಿದ್ದಾರೆ. ಆದರೆ ಗೃಹಿಣಿ ಸಂಗೀತಾ ಮೇಲೆ ಮೇಲ್ಛಾವಣಿ ಬಿದ್ದ ಕಾರಣ ಸ್ಥಳದಲ್ಲೆ ಸಾವನ್ನಪ್ಪಿದ್ದಾರೆ. ತದನಂತರ ಸ್ಥಳೀಯರು ಮಣ್ಣಲ್ಲಿ ಮುಚ್ಚಿಹೋಗಿದ್ದ ಸಂಗೀತಾ ಮೃತದೇಹವನ್ನು ಹೊರತೆಗೆದಿದ್ದಾರೆ.

ತಿಕೋಟಾ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

# ಮೂಲಭೂತ ಸೌಲಭ್ಯ ಒದಗಿಸಲು ಮನವಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಗಡ್ಡದೇವರಮಠ ನಗರ ಬಡಾವಣೆಗೆ ಹೋಗುವ ರಸ್ತೆಗಳು ಸಂಪೂರ್ಣ ಹದಗೆಟ್ಟಿದ್ದು, ಅದನ್ನು ಸುಧಾರಿಸುವದು ಹಾಗೂ ಪಟ್ಟಣದ ರಸ್ತೆಗಳನ್ನು ಅಭಿವೃದ್ಧಿಪಡಿಸಬೇಕೆಂದು ಆಗ್ರಹಿಸಿ ಗಡ್ಡದೇವರಮಠ ನಗರದ ನಿವಾಸಿಗಳು ಸೋಮವಾರ ಪುರಸಭೆ ಅಧ್ಯಕ್ಷೆ ಯಲ್ಲವ್ವ ದುರಗಣ್ಣವರ ಹಾಗೂ ಮುಖ್ಯಾಧಿಕಾರಿ ಮಹೇಶ ಹಡಪದ ಅವರಿಗೆ ಮನವಿ ಅರ್ಪಿಸಿದರು.



ಈ ಸಂದರ್ಭದಲ್ಲಿ ಪುರಸಭೆ ಮಾಜಿ ಸದಸ್ಯ ಅಮರೇಶ ತೆಂಬದಮನಿ ಮಾತನಾಡಿ, ಗಡ್ಡದೇವರಮಠ ನಗರದಲ್ಲಿ ಹಲವಾರು ವರ್ಷಗಳಿಂದ ನೂರಾರು ಕುಟುಂಬಗಳು ವಾಸಿಸುತ್ತಿದ್ದು, ರೈತರು, ಕೂಲಿ ಕಾರ್ಮಿಕರು ಹೆಚ್ಚಾಗಿ ಓಡಾಡುವ ಪ್ರಮುಖ ರಸ್ತೆಗಳ ಪರಿಸ್ಥಿತಿ ಗಂಭೀರವಾಗಿದೆ. ಇಲ್ಲಿ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಬೇಕು, ಹಾಳಾಗಿರುವ ಪಟ್ಟಣದ ಪ್ರಮುಖ ರಸ್ತೆಗಳನ್ನು ಅಭಿವೃದ್ಧಿಪಡಿಸಬೇಕು ಎಂದು ಅಗ್ರಹಿಸಿದರು. ಮನವಿ ಸ್ವೀಕರಿಸಿದ ಅಧ್ಯಕ್ಷರು ಹಾಗೂ ಮುಖ್ಯಾಧಿಕಾರಿಗಳು, ಪಟ್ಟಣದಲ್ಲಿನ ಅನೇಕ ಬಡಾವಣೆಗಳಲ್ಲಿ ಇರುವ ಸಮಸ್ಯೆಗಳನ್ನು ಹಂತಹಂತವಾಗಿ ಈಡೇರಿಸುವ ನಿಟ್ಟಿನಲ್ಲಿ ಆಡಳಿತ ಮಂಡಳಿಯವರ ಸಭೆಯಲ್ಲಿ ನಿರ್ಧರಿಸಿ ಸೂಕ್ತ ಕ್ರಮ ಕೈಗೊಳ್ಳುವದಾಗಿ ಭರವಸೆ ನೀಡಿದರು.

ಈ ವೇಳೆ ಪುರಸಭೆ ಉಪಾಧ್ಯಕ್ಷ ಫಿರ್ದೋಷ ಆಡೂರ, ಸದಸ್ಯ ಬಸವರಾಜ ಓದುನವರ, ಪ್ರಕಾಶ ಕೊಂಚಿಗೇರಿಮಠ, ಗಡ್ಡದೇವರಮಠ ನಗರದ ನಿವಾಸಿಗಳಾದ ಭಾಷಾಸಾಬ್ ಬೂದಿಹಾಳ, ಖಲಂದರ ಸೂರಣಗಿ, ಮಹೇಶ ಸೂರಣಗಿ, ಕರಬಸಪ್ಪ ಅಯ್ಯನವರ, ಹಜರತ ಅಲಿ ಸಂಕ್ಲಿಪುರ, ಖಾಜಾಪೀರ ಕಾರಡಗಿ, ಜಗನ್ನಾಥ ಹಬೀಬ, ಮಹಮ್ಮದಸಾದಿಕ್ ಕತಿಬ್, ದಾವಲಸಾಬ್ ಗುಳೇದಗುಡ್ಡ, ರೋಷನ್ ಬೆಂದಗಿಯವರ, ಮನೋಹರ್ ಗಡದವರ, ಬಾಬುಲಾಲ್ ಕಲೆಗಾರ ಸೇರಿದಂತೆ ಅನೇಕರು ಹಾಜರಿದ್ದರು.

# ವಿಕಸಿತ ಕೃಷಿ ಸಂಕಲ್ಪ ಅಭಿಯಾನ

■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

2025–26ನೇ ಸಾಲಿನ ಮುಂಗಾರು ಹಂಗಾಮಿನ ಪೂರ್ವ ಸಿದ್ಧತೆ ಅಂಗವಾಗಿ ವಿಕಸಿತ ಕೃಷಿ ಸಂಕಲ್ಪ ಅಭಿಯಾನವು ಐ.ಸಿ.ಎ.ಆರ್–ಕೆ.ಎಚ್. ಪಾಟೀಲ ಕೃಷಿ ವಿಜ್ಞಾನ ಕೇಂದ್ರ, ಕರ್ನಾಟಕ ರಾಜ್ಯ ಕೃಷಿ ಇಲಾಖೆ ಹಾಗೂ ಇತರೆ ಅಭಿವೃದ್ಧಿ ಇಲಾಖೆಗಳ ಸಹಯೋಗದಲ್ಲಿ ಇಲ್ಲಿಯ ಮಾರುತಿ ದೇವಸ್ಥಾನದ ಆವರಣದಲ್ಲಿ ಜರುಗಿತು.

ಲಕ್ಕುಂಡಿ ಸೇರಿದಂತೆ ಬೆಳಧಡಿ, ಬೆಳಧಡಿ ತಾಂಡಾ, ಹರ್ಲಾಪೂರ, ತಿಮ್ಮಾಪೂರ ಹಾಗೂ ಹರ್ತಿ ಗ್ರಾಮಗಳಲ್ಲಿ ವಿಕಸಿತ ಕೃಷಿ ಸಂಕಲ್ಪ ಅಭಿಯಾನ ನಡೆಯಿತು. ಧಾರವಾಡದ ಭಾರತೀಯ ದ್ವಿದಳ ಧಾನ್ಯಗಳ ಸಂಶೋಧನಾ ಸಂಸ್ಥೆಯ ವಿಜ್ಞಾನಿಗಳು, ಕರ್ನಾಟಕ ಸರಕಾರದ



ಕೃಷಿ ಇಲಾಖೆಯ ಸಹಾಯಕ ನಿರ್ದೇಶಕರು, ಕೃಷಿ ಅಧಿಕಾರಿಗಳು, ಆತ್ಮ ಸಿಬ್ಬಂದಿ, ಕೃಷಿ ಸಖಿಯರು, ತೋಟಗಾರಿಕೆ ಇಲಾಖೆಯ ಸಹಾಯಕ ನಿರ್ದೇಶಕರು, ಪಶು ಸಖಿಯರು, ಸ್ಥಳೀಯ ಚುನಾಯಿತ ಪ್ರತಿನಿಧಿಗಳು, ರೈತ ಮುಖಂಡರು ಈ ಅಭಿಯಾನದಲ್ಲಿ ಪಾಲ್ಗೊಂಡಿದ್ದರು.

ಅಭಿಯಾನದಲ್ಲಿ ವಿವಿಧ ತಂತ್ರಜ್ಞಾನಗಳಾದ ಬೀಜೋಪಚಾರ, ಸುಧಾರಿತ ತಳಿಗಳು, ತೋಟಗಾರಿಕೆ ಬೆಳೆಗಳು, ಸಿರಿಧಾನ್ಯ ಹಾಗೂ ಅವುಗಳ ಮಹತ್ವ, ಕೃಷಿ ಯಂತ್ರೋಪಕರಣಗಳು, ಸಮಗ್ರ ಕೃಷಿ ಪದ್ಧತಿಗಳ ತರಬೇತಿ ನೀಡಲಾಯಿತು. ವಿಕಸಿತ ಕೃಷಿ ಸಂಕಲ್ಪ ಅಭಿಯಾನ ಮುಂಗಾರು ಹಂಗಾಮಿನ ಅಡಿ ಅಭಿವೃದ್ಧಿ ಪಡಿಸಿದ ಮುಂಗಾರು ಬೆಳೆಗಳಾದ ಹೆಸರು, ಶೇಂಗಾ, ಸೂರ್ಯಕಾಂತಿ, ಗೋವಿನ ಜೋಳ, ಈರುಳ್ಳಿ ಬೆಳೆಗಳ ಕುರಿತ ಕೃಷಿ ಕೈಪಿಡಿಯನ್ನು ರೈತರಿಗೆ ನೀಡಲಾಯಿತು ಎಂದು ಹುಲಕೋಟಿ ಕೆ.ವಿ.ಕೆ ವಿಜ್ಞಾನಿ ಡಾ. ಕೆ.ವಿ. ಪಾಟೀಲ ತಿಳಿಸಿದರು.

ಕೃಷಿ ಇಲಾಖೆಯ ಡಾ. ಹೇಮಾವತಿ ಹಿರೇಗೌಡರ, ಸಹಾಯಕ ಕೃಷಿ ಅಧಿಕಾರಿರಮೇಶ ಜಟ್ಟಿ, ಆತ್ಮ ಸಿಬ್ಬಂದಿ ಸುಷ್ಮಿತಾ ಹೆಬಸೂರು, ತೋಟಗಾರಿಕೆ ಇಲಾಖೆಯ ನಿಂಗಪ್ಪ ವೆಂಕಟಾಪೂರ, ಗ್ರಾ.ಪಂ ಪಿ.ಡಿ.ಓ ಅಮೀರನಾಯ್ಕ, ಗ್ರಾ.ಪಂ ಸದಸ್ಯರಾದ ವೀರಣ್ಣ ಚಕ್ರಸಾಲಿ, ಪೀರಸಾಬ ನದಾಫ್, ವಿರೂಪಾಕ್ಷಪ್ಪ ಬೆಟಗೇರಿ, ಕುಬೇರಪ್ಪ ಬೆಂತೂರ, ಗ್ರಾ.ಪಂ ಮಾಜಿ ಸದಸ್ಯ ಬಿ.ಬಿ. ಮಾಡಲಗೇರಿ, ಮಹಿಳಾ ಸಂಜೀವಿನಿ ಒಕ್ಕೂಟದ ಚಂದ್ರಕಲಾ ಮಾಡಲಗೇರಿ, ಭಾರತೀಯ ಕಿಸಾನ ಸಂಘದ ತಾಲೂಕಾಧ್ಯಕ್ಷ ವೆಂಕಟೇಶ ದೊಂಗಡೆ ಮುಂತಾದವರಿದ್ದರು.

# ತಂದೆ-ತಾಯಿ, ಸಮಾಜದ ಋಣ ತೀರಿಸಿ



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಹೆತ್ತು ಹೊತ್ತು, ಸಾಕಿ ಸಲುಹಿದ ತಂದೆ, ತಾಯಿ ಹಾಗೂ ಸಮಾಜದ ಸೇವೆಯನ್ನು ನಿತ್ಯವೂ ಮಾಡಬೇಕು ಎಂದು ಶರಣಪ್ಪ ಬಾಳಿಕಾಯಿ ಹೇಳಿದರು.

ಅವರು ಪಟ್ಟಣದ ಮೇಲ್ಮಠದಲ್ಲಿ ಅವ್ವ ಸೇವಾ ಪ್ರತಿಷ್ಠಾನದಿಂದ ಮಠದ ಆವರಣ ಸ್ವಚ್ಛತಾ ಕಾರ್ಯದಲ್ಲಿ ಭಾಗವಹಿಸಿ ಮಾತನಾಡಿ, ಭಾರತಿಯ ಸಂಸ್ಕೃತಿಯಲ್ಲಿ ಹೆತ್ತ ತಂದೆ-ತಾಯಿಗಳಿಗೆ ಅಗ್ರವಾದ ಸ್ಥಾನಮಾನವಿದೆ. ತಾಯಿ ಜನ್ಮ ನೀಡಿದರೆ ತಂದೆ ಜೀವನ ನೀಡುವರು. ಸಮಾಜ ನಮ್ಮ ಬದುಕಿಗೆ ಸಹಾಯ ಮಾಡುತ್ತದೆ. ಸಮಾಜದ ಋಣ ತೀರಿಸಲೆಂದೇ ಶಿಕ್ಷಕ ಮಂಜುನಾಥ ಮಟ್ಟಿ ಅವರು ತಮ್ಮ ತಾಯಿಯವರ ಸ್ಮರಣಾರ್ಥ ತಂದೆ-ತಾಯಿ ಹಾಗೂ ಸಮಾಜದ ಋಣ ತೀರಿಸುವ ಕಾರ್ಯ ಮಾಡುತ್ತಿರುವುದು ಶ್ಲಾಘನೀಯ ಎಂದರು.

ಈ ಸಂದರ್ಭದಲ್ಲಿ ಮಾಹಾಂತಯ್ಯ ನಪೂರಿಮಠ, ಶಿವಾನಂದ ಆಪ್ತಗೇರಿ, ಅಶೋಕ ಗಡಾದ, ಜಗದೀಶ ಕೊಲ್ಲಾರಿ, ಪ್ರಭು ಬಳಿಗೇರ, ವಿ.ಡಿ. ಸಿದ್ದನಗೌಡರ, ಮಾಹಾಂತೇಶ ಕಣವಿ ಇದ್ದರು.

ಇಷ್ಟಲಿಂಗ ಮಹಾಪೂಜಾ ಸಮಾರಂಭದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು


# ಶಾಂತಿಯ ಬದುಕಿಗೆ ಧರ್ಮಾಚರಣೆ ಅವಶ್ಯಕ

■ವಿಜಯಸಾಕ್ಷಿ ಸುದ್ದಿ, ಮೈಸೂರು

ಆರೋಗ್ಯಪೂರ್ಣ ಸಮಾಜ ನಿರ್ಮಾಣಕ್ಕೆ ಆದರ್ಶ ಮೌಲ್ಯಗಳ ಅರಿವು-ಆಚರಣೆ ಮುಖ್ಯ. ಶಾಂತಿ ನೆಮ್ಮದಿಯ ಬದುಕಿಗೆ ಧರ್ಮಾಚರಣೆ ಅವಶ್ಯಕವೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಸೋಮವಾರ ಶ್ರೀರಾಮಪುರದ ಶಿವಭವನದಲ್ಲಿ ಜರುಗಿದ ಇಷ್ಟಲಿಂಗ ಮಹಾಪೂಜಾ ಹಾಗೂ ಧರ್ಮ ಜಾಗೃತಿ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಮಾನವ ಜೀವನದಲ್ಲಿ ಧರ್ಮ, ಅರ್ಥ, ಕಾಮ, ಮೋಕ್ಷ ಎಂಬ ಚತುರ್ವಿಧ ಪುರುಷಾರ್ಥಗಳಲ್ಲಿ ಒಂದನ್ನಾದರೂ ಸಂಪಾದಿಸಿಕೊಳ್ಳದಿದ್ದರೆ ಮಾನವ ಜೀವನ ವ್ಯರ್ಥವಾಗುತ್ತದೆ. ಸುಖದ ಮೂಲ ಧರ್ಮದ ಆಚರಣೆಯಲ್ಲಿದೆ. ಅರಿತು ಆಚರಿಸಿ ಬಾಳುವುದೇ ನಿಜವಾದ ಧರ್ಮ. ಧರ್ಮ ಎಂಬುದು ಅಶ್ವತ್ಥವೃಕ್ಷ ಇದ್ದಂತೆ. ಆ ವೃಕ್ಷದ ನೆರಳಿನಲ್ಲಿ ಸಕಲ ಜೀವರಾಶಿಗಳು ಬಾಳಿ ಬದುಕಿಸುವ ಶಕ್ತಿ ಇದೆ. ಶ್ರೀ ಜಗದ್ಗುರು ರೇಣುಕಾಚಾರ್ಯರು ಅಹಿಂಸಾದಿ ಧ್ಯಾನ ಪರ್ಯಂತರವಾದ ದಶಧರ್ಮ ಸೂತ್ರಗಳನ್ನು ಬೋಧಿಸಿ ಸಕಲರನ್ನು ಉದ್ಧರಿಸಿದ್ದಾರೆ.



ಪ್ರತಿವರ್ಷ ಇಂಥ ಕಾರ್ಯಕ್ರಮಗಳು ಜರುಗಿದರೆ ಯುವ ಜನಾಂಗಕ್ಕೆ ಅರಿವು ಉಂಟಾಗಿ ಸನ್ಮಾರ್ಗದಲ್ಲಿ ನಡೆಯಲು ಸಹಕಾರವಾಗುವುದರಲ್ಲಿ ಯಾವುದೇ ಸಂದೇಹವಿಲ್ಲ. ವಿರೂಪಾಕ್ಷ-ವಿಜಯಮ್ಮ ಮತ್ತು ಮಕ್ಕಳು ಸಂಘಟಿಸಿದ ಈ ಕಾರ್ಯದಲ್ಲಿ ಶಿವಭವನದ ಅಧ್ಯಕ್ಷ ಮಹೇಶ್ ಮೊದಲ್ಗೊಂಡು ಆಡಳಿತ ಮಂಡಳಿಯ ಎಲ್ಲಾ ಸದಸ್ಯರು ಸಹಕರಿಸಿರುವುದು ಅವರಲ್ಲಿರುವ ಧರ್ಮ ನಿಷ್ಠೆಗೆ ಸಾಕ್ಷಿಯಾಗಿದೆ ಎಂದರು.

ಅರಮನೆ ಜಪದಕಟ್ಟೆ ಮಠದ ಡಾ. ಮುಮ್ಮಡಿ ಚಂದ್ರಶೇಖರ ಶಿವಾಚಾರ್ಯ ಸ್ವಾಮಿಗಳು ಪ್ರಾಸ್ತಾವಿಕವಾಗಿ ಮಾತನಾಡಿದರು.

ಇಷ್ಟಲಿಂಗಾರ್ಚನೆಯಿಂದ ಸಂಕಷ್ಟಗಳು ದೂರವಾಗಿ ಇಷ್ಟಾರ್ಥ ಫಲಗಳು ಪ್ರಾಪ್ತವಾಗುತ್ತವೆ. ಶಿವನನ್ನು ಪೂಜಿಸಿದರೆ ಸಕಲ ದೇವಾನುದೇವತೆಗಳನ್ನು ಪೂಜಿಸಿದ ಪುಣ್ಯ ಫಲ ಪ್ರಾಪ್ತವಾಗುತ್ತದೆ. ವೈಚಾರಿಕತೆ ಹೆಸರಿನಲ್ಲಿ ಭಾರತೀಯ ಉತ್ಕೃಷ್ಟ ಸಂಸ್ಕೃತಿ ನಾಶಗೊಳ್ಳಬಾರದು. ಸತ್ಯ ಧರ್ಮದ ತಳಹದಿಯ ಮೇಲೆ ಮಾನವ ಜೀವನ ರೂಪಿತಗೊಂಡಾಗ ಬದುಕು ಸಮೃದ್ಧಗೊಳ್ಳುತ್ತದೆ. ಮೈಸೂರು ಮಹಾನಗರದಲ್ಲಿ ಇಷ್ಟಲಿಂಗ ಮಹಾಪೂಜೆ ಹಮ್ಮಿಕೊಂಡಿರುವುದು ಸಕಲ ಭಕ್ತರಿಗೆ ಹರುಷವನ್ನು ಉಂಟುಮಾಡಿದೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ನುಡಿದರು.

ಹಂಪಸಾಗರ ನವಲಿ ಹಿರೇಮಠದ ಅಭಿನವ ಶಿವಲಿಂಗ ರುದ್ರಮುನಿ ಶಿವಾಚಾರ್ಯ ಸ್ವಾಮಿಗಳು ಉಪಸ್ಥಿತರಿದ್ದರು.

ವಿರೂಪಾಕ್ಷ, ಟಿ.ಟಿ. ಮಹೇಶ್, ಪ್ರಸನ್ನ ಕುಮಾರ್, ಆದಪ್ಪ ಶೆಟ್ಟರು, ಗಿರೀಶ ಎನ್.ಜಿ, ವೀರೇಶ, ಖಂಡೇಶ್, ಅಶೋಕ ಹಾಗೂ ಕುಮಾರಸ್ವಾಮಿ ಇದ್ದರು. ಹಲವಾರು ಗಣ್ಯರಿಗೆ, ದಾನಿಗಳಿಗೆ ಶ್ರೀ ರಂಭಾಪುರಿ ಜಗದ್ಗುರುಗಳು ಗುರುರಕ್ಷೆ ನೀಡಿ ಆಶೀರ್ವದಿಸಿದರು. ಧನಗೂರು ಬೃಹನ್ಮಠದ ಮುಮ್ಮಡಿ ಷಡಕ್ಷರ ಶಿವಾಚಾರ್ಯ ಸ್ವಾಮಿಗಳು ನಿರೂಪಿಸಿದರು. ದಿನೇಶ್ ಶಾಸ್ತ್ರಿಗಳು ಸರ್ವರನ್ನು ಸ್ವಾಗತಿಸಿದರು. ಸಮಾರಂಭಕ್ಕೂ ಮುನ್ನ ಶಿವಭವನದಲ್ಲಿ ಬಾಳೆಹೊನ್ನೂರು ಶ್ರೀ ರಂಭಾಪುರಿ ಜಗದ್ಗುರುಗಳು ಇಷ್ಟಲಿಂಗ ಮಹಾಪೂಜೆ ನೆರವೇರಿಸಿ ಸಕಲ ಭಕ್ತರಿಗೆ ಶುಭ ಹಾರೈಸಿದರು.

# ಹಿರಿಯ ಪತ್ರಿಕಾ ವಿತರಕರಿಗೆ ಸನ್ಮಾನ



■ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಿನ ನರಸಾಪೂರ ಗ್ರಾಮದ ಜಗದ್ಗುರು ಮುಂಡರಗಿ ಅನ್ನದಾನೇಶ್ವರ ಶಾಖಾ ಮಠದಲ್ಲಿ ಗದಗ ಜಿಲ್ಲಾ ಪತ್ರಿಕಾ ವಿತರಕರ ಸಂಘದ ವತಿಯಿಂದ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾಧಕರಿಗೆ ಸನ್ಮಾನ ಸಮಾರಂಭ ಜರುಗಿತು. ಕಳೆದ 30 ವರ್ಷಗಳಿಂದ ಪತ್ರಿಕಾ ವಿತರಣೆಯಲ್ಲಿ ತೊಡಗಿಕೊಂಡಿರುವ ಸಂಘದ ಹಿರಿಯರಾದ ಕಲ್ಲಯ್ಯ ಎಸ್.ಹಿರೇಮಠ ಹಾಗೂ ಗಂಗಾಧರ ಮಡ್ಡಿ ಅವರನ್ನು ಸನ್ಮಾನಿಸಲಾಯಿತು.

ಮುಂಡರಗಿ ಅನ್ನದಾನೇಶ್ವರ ಶಾಖಾ ಮಠದ ವೀರೇಶ್ವರ ಸ್ವಾಮೀಜಿ, ಬನ್ನಿಕೊಪ್ಪ ಬ್ರಹನ್ಮಠ ಡಾ. ಸುಜ್ಞಾನದೇವ ಶಿವಾಚಾರ್ಯ ಸ್ವಾಮೀಜಿ, ಜಿಗೇರಿ-ವೆಂಕಾಟಾಪುರದ ಗುರುಸಿದ್ದೇಶ್ವರ ಶಿವಾಚಾರ್ಯ ಸ್ವಾಮೀಜಿ ಸಾನ್ನಿಧ್ಯ ವಹಿಸಿದ್ದರು.

ಸಂಘದ ರಾಜ್ಯಾಧ್ಯಕ್ಷ ಶಂಕರ್ ಕುದ್ರಿಮೋತಿ, ಜಿಲ್ಲಾ ಅಧ್ಯಕ್ಷ ವೀರಬಸಯ್ಯ ವೀರಕ್ತಮಠ ಸೇರಿದಂತೆ ಶಂಕರಗುರು ಕಂದಗಲ್ಲ, ಸಿದ್ಧರಾಮೇಶ್ವರ ಮಡಿವಾಳರ, ಕಿರಣ ಮದ್ಲಿ, ಕರಿಯಪ್ಪ ಗಾಣಿಗೇರ, ಮಂಜುನಾಥ ಕಬನೂರ ಹಾಗೂ ಸಂಘದ ಸರ್ವ ಪದಾಧಿಕಾರಿಗಳು ಹಾಜರಿದ್ದರು.

ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಿಂದ ವಿಶ್ವ ಪರಿಸರ ದಿನಾಚರಣೆ

# ಪರಿಸರ ನಾಶದಿಂದ ಭೂಮಂಡಲಕ್ಕೆ ಹಾನಿ

■ವಿಜಯಸಾಕ್ಷಿ ಸುದ್ದಿ, ಗದಗ

ಪರಿಸರವನ್ನು ನಾವು ರಕ್ಷಿಸಿದರೆ ಪರಿಸರ ನಮ್ಮನ್ನು ರಕ್ಷಿಸುತ್ತದೆ. ಪಂಚಭೂತಗಳಲ್ಲೂ ದೇವರನ್ನು ಕಾಣುವ ಸಂಸ್ಕೃತಿ ನಮ್ಮದು. ತೆಂಗು, ಆಲದಮರ, ಬನ್ನಿ ಮರ ಇನ್ನಿತರ ಮರಗಳನ್ನು ದೈವ ಸ್ವರೂಪಿಯಾಗಿ ಕಂಡರೂ ಪರಿಸರವನ್ನು ನಾಶ ಮಾಡುವದನ್ನು ಬಿಟ್ಟಿಲ್ಲ ಎಂದು ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ತಾಲೂಕಾ ಯೋಜನಾಧಿಕಾರಿ ಉಮಾ ಎನ್.ಜಿ ಹೇಳಿದರು.

ಶಹರ ವಲಯದ ಶಿವಾನಂದ ನಗರ ಕಾರ್ಯಕ್ಷೇತ್ರದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಪರಿಸರ ಜಾಗೃತಿ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.



ರಸ್ತೆಗಳ ಅಗಲೀಕರಣ, ಕೆರೆಗಳ ಮುಚ್ಚುವಿಕೆ, ಕಾಡಿನ ನಾಶ ಇದೇ ರೀತಿ ಮುಂದುವರೆದರೆ ಪ್ರಾಣಿ ಸಂಕುಲ ಮನುಷ್ಯ ಸಂಕುಲದ ಮೇಲೆ ವ್ಯತಿರಿಕ್ತ ಪರಿಣಾಮ ಬೀರುತ್ತದೆ. ಇದನ್ನು ತಪ್ಪಿಸಬೇಕಾದರೆ ಗಿಡಗಳನ್ನು ನೆಟ್ಟು ಸಂರಕ್ಷಣೆ ಮಾಡುವದು ಅಗತ್ಯವಾಗಿದೆ ಎಂದು ಹೇಳಿದರು.

ಹಿರಿಯ ಸಾಹಿತಿ ಹಾತಲಗೇರಿಯ ಮಲ್ಲಿಕಾರ್ಜುನ ಪೂಜಾರ ಮಾತನಾಡಿ, ವಿಶ್ವ ಪರಿಸರ ದಿನವು ಪ್ರಕೃತಿಯೊಂದಿಗೆ ಸಾಮರಸ್ಯದಿಂದ ಬದುಕಲು ಮತ್ತು ಜಾಗತಿಕ ತಾಪಮಾನ ಏರಿಕೆಯ ವಿರುದ್ಧ ಹೋರಾಡುವ ಅಗತ್ಯವನ್ನು ನಮಗೆ ಕಲಿಸುತ್ತದೆ ಎಂದು ಹೇಳಿದರು. ಶಾಲೆಯ ಮುಖ್ಯ ಶಿಕ್ಷಕ ಎಂ.ಎಂ. ಜೋಗಿನ ಮಾತನಾಡಿ, ಈ ದಿನವನ್ನು ಸಸಿ ನೆಟ್ಟು ಆಚರಿಸುವುದು ಜಾಗತಿಕವಾಗಿ ಇರುವ ವಾಡಿಕೆಯಾಗಿದೆ. ಆದರೆ ಇದರ ಹೊರತಾಗಿ ಪರಿಸರಕ್ಕೆ ಅಥವಾ ಭೂಮಿಗೆ ಸವಾಲಾಗಿರುವ ಹವಾಮಾನ ಬದಲಾವಣೆ, ಪ್ಲಾಸ್ಟಿಕ್‌ನಂತಹ ಗಂಭೀರ ಸಮಸ್ಯೆಗಳ ಬಗ್ಗೆ ನಾವು ಚರ್ಚಿಸಿ ಪರಿಹಾರ ಕಂಡುಕೊಳ್ಳಬೇಕಿದೆ ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಸುಷ್ಮಾ, ಕೃಷಿ ಮೇಲ್ವಿಚಾರಕ ಕಿರಣ ಮಹೇಂದ್ರಕರ, ಸಹ ಶಿಕ್ಷಕರು, ಒಕ್ಕೂಟದ ಉಪಾಧ್ಯಕ್ಷರಾದ ದ್ಯಾಮವ್ವ ವಡ್ಡರ ಮುಂತಾದವರು ಉಪಸ್ಥಿತರಿದ್ದರು. ಪರಿಸರ ಪೂರಕ ಸ್ಪರ್ಧೆಗಳನ್ನು ಏರ್ಪಡಿಸಿ ವಿಜೇತ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು.

# ಕರವೇ ಬೆಟಗೇರಿ ವಾರ್ಡ್ ಘಟಕದ ಉದ್ಘಾಟನೆ



■ವಿಜಯಸಾಕ್ಷಿ ಸುದ್ದಿ, ಗದಗ

ಬೆಟಗೇರಿ ನಗರದ ವಾರ್ಡ್ ನಂ. 3, ಬಣ್ಣದ ನಗರದ ಸರಕಾರಿ ಶಾಲೆಯ ನಂ. 11ರಲ್ಲಿ ಕರ್ನಾಟಕ ರಕ್ಷಣಾ ವೇದಿಕೆಯ ರಾಜ್ಯಾಧ್ಯಕ್ಷ ಟಿ.ಎ. ನಾರಾಯಣಗೌಡರ ಹೋರಾಟಗಳನ್ನು, ಕರವೇ ತತ್ವ-ಸಿದ್ಧಾಂತಗಳನ್ನ ಮೆಚ್ಚಿ, ವಾರ್ಡ್ ಘಟಕವನ್ನು ಉದ್ಘಾಟಿಸಿ, ನೂತನ ಕಾರ್ಯಕರ್ತರ ಸೇರ್ಪಡೆ ಹಾಗೂ ಪದಾಧಿಕಾರಿಗಳ ಆಯ್ಕೆ ಮಾಡಲಾಯಿತು.

ಸಭೆಯ ಅಧ್ಯಕ್ಷತೆಯನ್ನು ಗದಗ ಜಿಲ್ಲಾಧ್ಯಕ್ಷ ಹನುಮಂತಪ್ಪ ಹೆಚ್. ಅಬ್ಬಿಗೇರಿ ವಹಿಸಿ ಮಾತನಾಡಿ, ತಮ್ಮ ವಾರ್ಡಿನಲ್ಲಿ ಯಾವುದೇ ಸಮಸ್ಯೆ ಇದ್ದರೂ ಸಂಘಟನಾತ್ಮಕ ಹೋರಾಟ, ಸಮಾಜಮುಖಿ ಕೆಲಸಗಳನ್ನು ಮಾಡೋಣ ಎಂದು ತಿಳಿಸಿದರು.

ಸಭೆಯ ನೇತೃತ್ವವನ್ನು ಜಿಲ್ಲಾ ಉಪಾಧ್ಯಕ್ಷ ವಿನಾಯಕ ಬದಿ ವಹಿಸಿದ್ದರು. ಇದೇ ಸಂದರ್ಭದಲ್ಲಿ ಲಕ್ಷ್ಮಣ ಕುಂಬಾರರನ್ನು ಅಧ್ಯಕ್ಷರನ್ನಾಗಿ ಆಯ್ಕೆ ಮಾಡಲಾಯಿತು. ಈ ಸಂದರ್ಭದಲ್ಲಿ ಜಿಲ್ಲಾ ಉಪಾಧ್ಯಕ್ಷ ಮಾರುತಿ ಈಳಿಗೆರ್, ಮಹಿಳಾ ಜಿಲ್ಲಾ ಉಪಾಧ್ಯಕ್ಷರಾದ ಲಕ್ಷ್ಮೀ ಹಿತ್ತಲಮನಿ, ಕುಮಾರ್ ರೇವಣ್ಣವರ್, ತೌಶಿಫ್ ಡಾಲಾಯತ್, ಶಿವು ಮಠದ, ದಾವಲಸಾಬ ತಹಸೀಲ್ದಾರ, ರಫೀಕ್ ನದಾಫ್, ಇಸಾಕ್ ನದಾಫ್, ಸಿರಾಜ್ ಹೊಸಮನಿ ಸೇರಿದಂತೆ ವಾರ್ಡಿನ ಗುರು-ಹಿರಿಯರು, ಯುವಕರು, ಮಹಿಳೆಯರು ಉಪಸ್ಥಿತರಿದ್ದರು.

## ಸಂಚಾರ ದಟ್ಟಣೆಯಿಂದ ಮುಕ್ತಗೊಳಿಸಲು ದೆಹಲಿಯಲ್ಲಿ ಹಲವು ಹೆದ್ದಾರಿ ನಿರ್ಮಾಣ: ನಿತಿನ್ ಗಡ್ಕರಿ!

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಸಂಚಾರ ದಟ್ಟಣೆಯಿಂದ ಮುಕ್ತಗೊಳಿಸಲು ದೆಹಲಿಯಲ್ಲಿ ಹಲವು ಹೆದ್ದಾರಿ ನಿರ್ಮಾಣ ಮಾಡಲಾಗುತ್ತದೆ ಎಂದು ಕೇಂದ್ರ ಸಚಿವ ನಿತಿನ್ ಗಡ್ಕರಿ ಹೇಳಿದ್ದಾರೆ. ಈ ಸಂಬಂಧ ಮಾತನಾಡಿದ ಅವರು, ಕೇಂದ್ರ ಸರ್ಕಾರವು ಸುಮಾರು 25 ಹಸಿರು ಎಕ್ಸ್‌ಪ್ರೆಸ್ ಹೆದ್ದಾರಿಗಳನ್ನು ನಿರ್ಮಿಸುತ್ತಿದೆ, ಇದು ಭಾರತದ ಸಂಪೂರ್ಣ ನಕ್ಷೆಯನ್ನು ಬದಲಾಯಿಸುತ್ತದೆ. ದೆಹಲಿಯನ್ನು ಸಂಚಾರ ದಟ್ಟಣೆ ಮತ್ತು ಮಾಲಿನ್ಯದ ಸಮಸ್ಯೆಗಳಿಂದ ಮುಕ್ತಗೊಳಿಸಲು ಕೇಂದ್ರ ಸರ್ಕಾರವು 1.5 ಲಕ್ಷ ಕೋಟಿ ರೂ.ಗಳ ರಸ್ತೆಗಳನ್ನು ನಿರ್ಮಿಸುತ್ತಿದೆ ಎಂದರು.

ನಾವು ದೆಹಲಿಯಿಂದ ಡೆಹ್ರಾಡೂನ್‌ಗೆ 2 ಗಂಟೆಗಳಲ್ಲಿ, ದೆಹಲಿಯಿಂದ ಕತ್ರಾಗೆ 6 ಗಂಟೆಗಳಲ್ಲಿ, ದೆಹಲಿಯಿಂದ ಶ್ರೀನಗರಕ್ಕೆ 8 ಗಂಟೆಗಳಲ್ಲಿ, ದೆಹಲಿಯಿಂದ ಜೈಪುರಕ್ಕೆ 2 ಗಂಟೆಗಳಲ್ಲಿ, ಚೆನ್ನೈನಿಂದ ಬೆಂಗಳೂರಿಗೆ 2 ಗಂಟೆಗಳಲ್ಲಿ, ಬೆಂಗಳೂರಿನಿಂದ ಮೈಸೂರಿಗೆ 1 ಗಂಟೆಯಲ್ಲಿ, ಮೀರತ್‌ನಿಂದ ದೆಹಲಿಗೆ 50 ನಿಮಿಷಗಳಲ್ಲಿ ತಲುಪುತ್ತೇವೆ.

ನಾವು ಈ ರೀತಿಯ ಸುಮಾರು 25 ಹಸಿರು ಎಕ್ಸ್‌ಪ್ರೆಸ್ ಹೆದ್ದಾರಿಗಳನ್ನು ನಿರ್ಮಿಸುತ್ತಿದ್ದೇವೆ. ಇದು ಭಾರತದ ಸಂಪೂರ್ಣ ನಕ್ಷೆಯನ್ನು ಬದಲಾಯಿಸುತ್ತದೆ ಎಂದು ನಾನು ಭಾವಿಸುತ್ತೇನೆ. ನಾವು ಉತ್ತರಾಖಂಡದಲ್ಲಿ ಕೇದಾರನಾಥ ಮತ್ತು ಹೇಮಕುಂಡ್ ರೋಪ್‌ವೇಗಳನ್ನು ನಿರ್ಮಿಸುತ್ತಿದ್ದೇವೆ ಎಂದಿದ್ದಾರೆ.

ದೆಹಲಿಯನ್ನು ಸಂಚಾರ ದಟ್ಟಣೆ ಮತ್ತು ಮಾಲಿನ್ಯದ ಸಮಸ್ಯೆಗಳಿಂದ ಮುಕ್ತಗೊಳಿಸಲು ನಾವು 1.5 ಲಕ್ಷ ಕೋಟಿ ರೂ. ಮೌಲ್ಯದ ರಸ್ತೆಗಳನ್ನು ನಿರ್ಮಿಸುತ್ತಿದ್ದೇವೆ ಎಂದು ಹೇಳಿದ್ದಾರೆ.

# ಶಾಲಾ ಸೌಲಭ್ಯಗಳನ್ನು ಬಳಸಿಕೊಳ್ಳಲು ಕರೆ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ವಿದ್ಯಾರ್ಥಿಗಳು ಮತ್ತು ಪಾಲಕರು ಶಾಲೆಯಲ್ಲಿ ಸಿಗುವ ಸೌಲಭ್ಯಗಳನ್ನು ಸರಿಯಾಗಿ ಬಳಸಿಕೊಳ್ಳಬೇಕು. ನಿತ್ಯವೂ ಶಾಲೆಗೆ ಬರಲು ಅನುಕೂಲವಾಗುವಂತೆ ಸರಕಾರ ವಿವಿಧ ಯೋಜನೆಗಳನ್ನು ಮಕ್ಕಳಿಗಾಗಿ ಜಾರಿಗೊಳಿಸಿದೆ. ಈ ಯೋಜನೆಗಳು ನಿಮ್ಮ ಮಕ್ಕಳ ಬೌದ್ಧಿಕ ಶಕ್ತಿಯನ್ನು ಹೆಚ್ಚಿಸಲು ಅನುಕೂಲವಾಗಿವೆ. ಇದರ ಸಮರ್ಪಕ ಬಳಕೆಯನ್ನು ಮಾಡಿಕೊಳ್ಳಬೇಕೆಂದು ತೋಟಗಂಟಿ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯ ಶಿಕ್ಷಕಿ ಎಚ್.ಸಿ. ಶೈಲಾ ಹೇಳಿದರು.

ಶಾಲೆಯ ವಿದ್ಯಾರ್ಥಿಗಳಿಗೆ ಪಠ್ಯಪುಸ್ತಕ ಮತ್ತು ಬ್ಯಾಗ್‌ಗಳನ್ನು ವಿತರಿಸಿದ ನಂತರ ಅವರು ಮಾತನಾಡಿದರು.

ನಿಮ್ಮ ಗ್ರಾಮದಲ್ಲಿಯೆ 7ನೇ ತರಗತಿಯವರೆಗೆ ಶಾಲೆ ಕಲಿಯಲು ಅನುಕೂಲವಿದ್ದು, ಈ ಅನುಕೂಲತೆಯನ್ನು ಬಳಸಿಕೊಂಡು ಉತ್ತಮ ವಿದ್ಯಾಭ್ಯಾಸ ಮಾಡಬೇಕು. ಪಾಲಕರೂ ಸಹ ನಿಮ್ಮ ಮಕ್ಕಳ ಬಗ್ಗೆ ವಿಶೇಷ ಕಾಳಜಿ ವಹಿಸಬೇಕು. ಗ್ರಾಮೀಣ ಭಾಗದ ಮಕ್ಕಳು ಯಾರಿಗಿಂತಲೂ ಕಡಿಮೆ ಇಲ್ಲವೆಂಬುದನ್ನು ತಿಳಿದುಕೊಂಡು ಮನೆಯಲ್ಲಿ ಮಕ್ಕಳ ಅಭ್ಯಾಸವನ್ನು ಗಮನಿಸಿರಿ ಎಂದರು.

ಈ ಸಂದರ್ಭದಲ್ಲಿ ಎಸ್‌ಡಿಎಂಸಿ ಅಧ್ಯಕ್ಷ ಕಲ್ಲನಗೌಡ ಹೊನ್ನಪ್ಪಗೌಡ್ರ, ಸದಸ್ಯ ವೈ.ಬಿ. ಪಾಟೀಲ, ಪಾಲಕ ಮಲ್ಲನಗೌಡ್ರ, ಸಹ ಶಿಕ್ಷಕಿಯರಾದ ಐ.ವಿ. ರಡ್ಡೇರ, ವಿಜಯಲಕ್ಷ್ಮೀ ಕರವೀರಮಠದ, ರೇಖಾ ಮಡಿವಾಳರ ಸೇರಿದಂತೆ ಪಾಲಕರು ಉಪಸ್ಥಿತರಿದ್ದರು.


# ಫಸಲ್ ಬಿಮಾ ಯೋಜನೆಯಡಿ ಬೆಳೆಗಳಿಗೆ ವಿಮಾ ಸೌಲಭ್ಯ; ಅಧಿಸೂಚನೆ

■ವಿಜಯಸಾಕ್ಷಿ ಸುದ್ದಿ, ಗದಗ

2025-26ನೇ ಸಾಲಿನ ಮುಂಗಾರು ಹಂಗಾಮು ಅವಧಿಗೆ ಸರ್ಕಾರದ ಕೃಷಿ ಇಲಾಖೆಯ ಅಧಿಸೂಚನೆಯಂತೆ ಗದಗ ಜಿಲ್ಲೆಯಲ್ಲಿ ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ಬಿಮಾ ಯೋಜನೆಯಡಿ ತೋಟಗಾರಿ-ಕೆ ಬೆಳೆಗಳಾದ ಈರುಳ್ಳಿ ಮತ್ತು ಕೆಂಪು ಮೆಣಸಿನಕಾಯಿ ಬೆಳೆಗಳಿಗೆ ವಿಮಾ ಸೌಲಭ್ಯ ಅಧಿಸೂಚನೆ ಹೊರಡಿಸಲಾಗಿದೆ. ನೀರಾವರಿ ಈರುಳ್ಳಿ ಮತ್ತು ಕೆಂಪು ಮೆಣಸಿನಕಾಯಿ ಬೆಳೆಗೆ ವಿಮೆ ಕಂತು ಪಾವತಿಗೆ ದಿನಾಂಕ 31-07-2025 ರಂದು ಕೊನೆಯ ದಿನವಾಗಿರುತ್ತದೆ. ಮಳೆಯಾಶ್ರಿತ ಈರುಳ್ಳಿ ಮತ್ತು ಕೆಂಪು ಮೆಣಸಿನಕಾಯಿ ಬೆಳೆಗೆ ವಿಮೆ ಕಂತು ಪಾವತಿಗೆ ದಿನಾಂಕ: 16-08-2025 ರಂದು ಕೊನೆಯ ದಿನವಾಗಿದೆ. ಆಸಕ್ತ ರೈತರು ವಿಮೆಗೆ ನೋಂದಾಯಿಸಿಕೊಳ್ಳಲು ಅರ್ಜಿ ಪತ್ರ, ಪಹಣಿ, ಆಧಾರ್ ಸಂಖ್ಯೆ ಜೋಡಿಸಿದ ಬ್ಯಾಂಕ್ ಖಾತೆ ಪುಸ್ತಕದ ನಕಲು ಪ್ರತಿ ಹಾಗೂ ಸ್ವಯಂ ಘೋಷಿತ ಬೆಳೆ ದೃಢೀಕರಣ ಪತ್ರದೊಂದಿಗೆ ಹತ್ತಿರದ ರಾಷ್ಟ್ರೀಕೃತ ಬ್ಯಾಂಕ್, ಸಾಮಾನ್ಯ ಸೇವಾ ಕೇಂದ್ರ, ಗ್ರಾಮ ಒನ್ ಕೇಂದ್ರಗಳಿಗೆ ಸಂಪರ್ಕಿಸುವುದು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಪಂಚಾಯತ್ ಗದಗ ಯಾ ತಾಲೂಕಿನ ತೋಟಗಾರಿಕೆ ಇಲಾಖೆ , ಕೃಷಿ ಇಲಾಖೆ ಕಚೇರಿಗಳಿಗೆ ಭೇಟಿ ನೀಡಿ ಹೆಚ್ಚಿನ ಮಾಹಿತಿಯನ್ನು ಪಡೆಯಬಹುದೆಂದು ತೋಟಗಾರಿಕೆ ಇಲಾಖೆಯ ಉಪನಿರ್ದೇಶಕರು ತಿಳಿಸಿದ್ದಾರೆ.

# ನಿಧನ

**ಪ್ರೊ. ಮಲ್ಲಿಕಾರ್ಜುನ ರಡ್ಡೇರ**



ಗದಗ: ಬಾಪೂಜಿ ನಗರದ ನಿವಾಸಿ ಪ್ರೊ. ಮಲ್ಲಿಕಾರ್ಜುನ ಎಸ್. ರಡ್ಡೇರ (73) ಜೂ. 9 ರ ಸೋಮವಾರ ಸಂಜೆ ನಿಧನರಾಗಿದ್ದಾರೆ.

ಮೃತರು ಪತ್ನಿ, ಓರ್ವ ಪುತ್ರ ಹಾಗೂ ಪುತ್ರಿ ಸೇರಿದಂತೆ ಅಪಾರವಾದುದು ಬಂಧು-ಬಳಗ ಅಗಲಿದ್ದು, ಮೃತರ ಅಂತ್ಯಕ್ರಿಯೆಯು ಜೂ. 10 ರ ಮಂಗಳವಾರ ಮಧ್ಯಾಹ್ನ 12 ಗಂಟೆಗೆ ಜರುಗಲಿದ್ದು, ಅಂತಿಮಯಾತ್ರೆ ಕಳಸಾಪೂರ ರಸ್ತೆಯ ಬಾಪೂಜಿ ನಗರದ ಅವರ ಸ್ವಗೃಹದಿಂದ ಹೊರಡಲಿದೆ.

ಕರ್ನಾಟಕ ರಾಜ್ಯ ಯೋಗಾಸನ ಕ್ರೀಡಾ ಚಾಂಪಿಯನ್‌ಶಿಪ್ ಸ್ಪರ್ಧೆ

# ಯೋಗ ಪಾಠಶಾಲೆಗೆ 'ಉತ್ತಮ ತಂಡ' ಪ್ರಶಸ್ತಿ

■ವಿಜಯಸಾಕ್ಷಿ ಸುದ್ದಿ, ಗದಗ

ಯೋಗ ಫೆಡರೇಶನ್ ಆಫ್ ಇಂಡಿಯಾ ಪಂಚಕುಲ (ಹರಿಯಾಣ) ಇವರ ಸಂಯೋಜನೆಯಲ್ಲಿ ಕರ್ನಾಟಕ ರಾಜ್ಯ ಅಮೆಚೂರ್ ಯೋಗ ಸ್ಪೋರ್ಟ್ಸ್ ಅಸೋಸಿಯೇಶನ್ ಬೆಂಗಳೂರು ಇವರು ಶ್ರೀ ಗುರುಕುಲ ಯೋಗ ವಿದ್ಯಾ ಕೇಂದ್ರ ಸಾಗರ ಇವರ ನಿರ್ವಹಣೆಯಲ್ಲಿ, ಶಿವಮೊಗ್ಗ ಜಿಲ್ಲಾ ಅಮೆಚೂರ್ ಯೋಗಾಸನ ಸ್ಪೋರ್ಟ್ಸ್ ಅಸೋಸಿಯೇಶನ್ ಮತ್ತು ಉಚಿತ ಕಾನೂನು ನೆರವು ಸಮಿತಿ ಸಾಗರ ಇವರ ಸಹಭಾಗಿತ್ವದಲ್ಲಿ ಸಾಗರದ ಈಡಿಗರ ಸಮುದಾಯ ಭವನದಲ್ಲಿ ನಡೆಸಿದ ಕರ್ನಾಟಕ ರಾಜ್ಯ ಯೋಗಾಸನ ಕ್ರೀಡಾ ಚಾಂಪಿಯನ್‌ಶಿಪ್ ಸ್ಪರ್ಧೆಯಲ್ಲಿ ಗದುಗಿನ ಎಸ್.ವಾಯ್.ಬಿ.ಎಂ.ಎಸ್ ಯೋಗಪಾಠಶಾಲೆಯ ತಂಡವು ಭಾಗವಹಿಸಿ ಉತ್ತಮ ತಂಡ ಪ್ರಶಸ್ತಿ ಪಡೆದಿದೆ. ತಂಡದ ಸದಸ್ಯರಲ್ಲಿ ವೆಂಕಟೇಶ ಹಾಲನ್ನವರ (12-14 ವರ್ಷದ ಬಾಲಕರ ವಿಭಾಗ) ತೃತೀಯ ಸ್ಥಾನ, ಸಂಜನಾ ಸಜ್ಜನರ (21-25 ವರ್ಷದ ಮಹಿಳೆಯರ ವಿಭಾಗ) 4ನೇ ಸ್ಥಾನ, ಯಶವಂತ ಮತ್ತೂರ (35-45 ವರ್ಷ ಪುರುಷರ ವಿಭಾಗ) ಪ್ರಥಮ ಸ್ಥಾನ, ಜಯಶ್ರೀ ಡಾವಣಗೇರಿ (50-60 ವರ್ಷದ ಮಹಿಳೆಯರ ವಿಭಾಗ) 5ನೇ ಸ್ಥಾನ, ಕೆ.ಎಸ್. ಪಲ್ಲೇದ (30 ವರ್ಷ ಮೇಲ್ಪಟ್ಟು ತೀರ್ಪುಗಾರರ ಪುರುಷರ ವಿಭಾಗ) ತೃತೀಯ ಸ್ಥಾನ ಗಳಿಸಿ ಯೋಗ ಪಾಠಶಾಲೆ ಮತ್ತು ಗದಗ ಜಿಲ್ಲೆಯ ಕೀರ್ತಿಯನ್ನು ಹೆಚ್ಚಿಸಿದ್ದಾರೆ.



ಸಂಘಟನೆಯ ಅಧ್ಯಕ್ಷರು ಮತ್ತು ಪದಾಧಿಕಾರಿಗಳಿಗೆ ಮತ್ತು ಯೋಗ ಪಾಠಶಾಲೆ ತಂಡ ಪ್ರಶಸ್ತಿ ಪಡೆಯಲು ಶ್ರಮಿಸಿದ ಮಹನೀಯರೆಲ್ಲರಿಗೂ ಎಸ್.ವಾಯ್.ಬಿ.ಎಂ.ಎಸ್. ಯೋಗಪಾಠಶಾಲೆಯ ಮಹಾಪೋಷಕರು ಹಾಗೂ ಅಧ್ಯಕ್ಷರಾದ ಪೂಜ್ಯಶ್ರೀ ಜಗದ್ಗುರು ಡಾ. ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳವರು, ಮ್ಯಾನೇಜರ್ ಎಂ.ಎಸ್. ಅಂಗಡಿ, ಆಡಳಿತಾಧಿಕಾರಿ ಎಸ್.ಎಸ್. ಪಟ್ಟಣಶೆಟ್ಟರ, ಗದಗ ಜಿಲ್ಲಾ ಯೋಗ ಒಕ್ಕೂಟ, ಗದಗ ಜಿಲ್ಲಾ ಅಮೇಚೂರ್ ಯೋಗಾಸನ ಸ್ಪೋರ್ಟ್ಸ್ ಅಸೋಸಿಯೇಶನ್ ಗದಗ ಮತ್ತು ಯೋಗ ಬಾಂಧವರು, ಅಭಿಮಾನಿ ಸದಸ್ಯರೆಲ್ಲರೂ ಹೃತ್ಪೂರ್ವಕ ಅಭಿನಂದನೆಗಳನ್ನು ತಿಳಿಸಿದ್ದಾರೆ.

### 59ನೇ ವರ್ಷದ ಅಸ್ತಮಾ ಯಜ್ಞದ ಕಾರ್ಯಕ್ರಮ ಉದ್ಘಾಟಿಸಿದ ಶೀ ಚನ್ನವೀರ ಮಹಾಸ್ವಾಮಿಗಳು

# ಆಯುರ್ವೇದ ಔಷಧಿಯ ಮಹತ್ವ ಕಡಿಮೆಯಾಗದು



ಶ್ವಾಸಕೋಶ ಸಂಬಂಧಿ ಕಾಯಿಲೆಗಳಿಗೆ ದಿ. ವೈದ್ಯ ಬಾಬುರಾವ್ ಅವರು ನೀಡುತ್ತಿದ್ದ ಔಷಧಿ ಪರಿಣಾಮಕಾರಿಯಾಗಲು ಅವರಿಗಿರುವ ಗುರುರಾಯರ ಕೃಪಾಶೀರ್ವಾದ ಮತ್ತು ಆಧ್ಯಾತ್ಮಿಕ, ಸಾತ್ವಿಕ ಶಕ್ತಿಯ ಬಲ ಕಾರಣವಾಗಿದೆ. ಔಷಧೀಯ ಶಕ್ತಿಯ ಜೊತೆಗೆ ಶ್ರದ್ಧೆ, ದೇವರ ಪ್ರಾರ್ಥನೆ ಮತ್ತು ನಂಬಿಕೆ ಮುಖ್ಯವಾಗಿದೆ.

ಈ ಪುಣ್ಯದ ಕಾರ್ಯವನ್ನು ಸಾರ್ವಜನಿಕರ ಸಹಕಾದೊಂದಿಗೆ ಮುಂದುವರೆಸಿಕೊಂಡು ಹೋಗುತ್ತಿರುವುದು ಶ್ಲಾಘನೀಯ ಎಂದು ಶೀ ಚನ್ನವೀರ ಮಹಾಸ್ವಾಮಿಗಳು ಹೇಳಿದರು.



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸನಾತನ ಪರಂಪರೆಯಲ್ಲಿ ಆಯುರ್ವೇದಕ್ಕೆ ಕ್ಲಿಷ್ಟವಾದ ರೋಗ ಗುಣಪಡಿಸುವ ಶಕ್ತಿಯಿದೆ. ಆರೋಗ್ಯ ಕ್ಷೇತ್ರ ಎಷ್ಟೇ ಮುಂದುವರೆದಿದ್ದರೂ ಆಯುರ್ವೇದ ಔಷಧಿ ಮಹತ್ವ ಕಡಿಮೆಯಾಗುವುದಿಲ್ಲ ಎಂದು ಹೂವಿನಶಿಗ್ಲಿ ವಿರಕ್ತಮಠದ ಶೀ ಚನ್ನವೀರ ಮಹಾಸ್ವಾಮಿಗಳು ಹೇಳಿದರು.

ಅವರು ಭಾನುವಾರ ಪಟ್ಟಣದ ಪ್ರಾಥಮಿಕ ಶಾಲೆ ನಂ.1ರ ಆವರಣದಲ್ಲಿ 59ನೇ ವರ್ಷದ ಅಸ್ತಮಾ ಯಜ್ಞದ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಆರೋಗ್ಯ ಸಂಪತ್ತು ಎಲ್ಲಕ್ಕಿಂತ ಮಿಗಿಲಾದುದು. ನಿತ್ಯ ಜೀವನದಲ್ಲಿ ಆಯುರ್ವೇದ ಮತ್ತು ಸಾಂಪ್ರದಾಯಿಕ ಆಹಾರ ಪದ್ಧತಿ ಅಳವಡಿಸಿಕೊಳ್ಳಬೇಕು. ಕಳೆದ 59 ವರ್ಷಗಳಿಂದ ಮೃಗಶಿರಾ ನಕ್ಷತ್ರದ ವೇಳೆಗೆ ಗಿಡಮೂಲಿಕೆಗಳಿಂದ ಸಿದ್ಧಪಡಿಸಿದ ಔಷಧಿಯನ್ನು ಅಸ್ತಮಾ ರೋಗಿಗಳಿಗೆ ಉಚಿತವಾಗಿ ನೀಡುವ ಮೂಲಕ ಲಕ್ಷಾಂತರ ಜನರನ್ನು ಈ ರೋಗದಿಂದ ವಾಸಿ ಮಾಡಿದ ಕೀರ್ತಿ ದಿ. ಬಾಬುರಾವ ಕುಲಕರ್ಣಿಯವರಿಗೆ ಸಲ್ಲುತ್ತದೆ. ಮಂತ್ರೌಷಧಿಗಾಗಿ ರಾಜ್ಯದ ಮೂಲೆ ಮೂಲೆಗಳಿಂದ ಆಗಮಿಸುವ ಜನಸಮೂಹವೇ ಔಷಧಿಯ ಮಹತ್ವ ಸಾರುತ್ತದೆ ಎಂದರು.

ಪ್ರದೀಪ ಅಗ್ನಿಹೋತ್ರಿ ಮಾತನಾಡಿ, ಅಸ್ತಮಾ ರೋಗಕ್ಕೆ ಅಲೋಪತಿಯಲ್ಲಿ ಸಂಪೂರ್ಣವಾಗಿ ಗುಣಪಡಿಸುವಂತಹ ಔಷಧಿ ಇಲ್ಲ. ಆದರೆ ಆಯುರ್ವೇದಲ್ಲಿ ಇದನ್ನು ಗುಣಪಡಿಸಬಹುದಾಗಿದೆ. ತಾವು ನೀಡುವ ಔಷಧಿಯಲ್ಲಿ 18 ಗಿಡಮೂಲಿಕೆಗಳ ಜೊತೆಗೆ ಗುರುಕಾರುಣ್ಯವೂ ಅಡಗಿದೆ. ರೋಗ ನಿವಾರಣೆಗೆ ಔಷಧಿ ಸ್ವೀಕರಿಸುವ ಜೊತೆಗೆ ಪಥ್ಯ ಪಾಲಿಸುವುದು ಮುಖ್ಯ. ಐಸ್‌ಕ್ರೀಮ್, ಹಲಸಿನಹಣ್ಣು, ಗಿಣ್ಣ, ಮೊಸರು, ಬಾಳೆ ಮತ್ತು ತಂಬಾಕು ಬಳಸಬಾರದು. ಸಿರಿಧಾನ್ಯ, ಸೊಪ್ಪಿನಪಲ್ಯ ಊಟಕ್ಕೆ ಬಳಸಬೇಕು ಎಂಬ ಕೆಲ ವಿಧಿಗಳನ್ನು ತಿಳಿಸಿದರು.

ಕೃಷ್ಣ ಕುಲಕರ್ಣಿ ಮಾತನಾಡಿ, ಆರೋಗ್ಯಕರ ಸಮಾಜ ನಿರ್ಮಾಣಕ್ಕಾಗಿ ಪಟ್ಟಣದಲ್ಲಿ ಇದೊಂದು ಪರಂಪರೆಯನ್ನು ಹಾಕಿಕೊಟ್ಟಿರುವ ತಂದೆಯವರಾದ ದಿ. ವೈದ್ಯ ಬಾಬುರಾವ ಕುಲಕರ್ಣಿ ಅವರಿಂದ ಕಲಿತ ಈ ಸೇವೆಯಿಂದ ಆತ್ಮ ಸಂತೃಪ್ತಿ ತಮ್ಮದಾಗಿದೆ. ಪ್ರತಿ ವರ್ಷ ಸಾವಿರಾರು ಜನರಿಗೆ ಔಷಧಿ ಕೊಡುವ ಕಾರ್ಯಕ್ಕೆ ಪಟ್ಟಣದ ಜನತೆಯ ಸಹಕಾರ ಶ್ಲಾಘನೀಯ ಎಂದರು.

ಪ್ರಕಾಶ ಲಿಂಬಯ್ಯಸ್ವಾಮಿಮಠ ಮಾತನಾಡಿ, ಮೃಗಶಿರಾ ಮಳೆ ನಕ್ಷತ್ರದ ವೇಳೆಗೆ ಅಸ್ತಮಾ ರೋಗಿಗಳಿಗೆ ಉಚಿತ ಔಷಧಿ ನೀಡುವ ಮೂಲಕ ಲಕ್ಷಾಂತರ ಜನರ ಬಾಳಲ್ಲಿ ಆರೋಗ್ಯ, ಸಂತಸ, ನೆಮ್ಮದಿ ಮೂಡಿಸುವ ನಿಸ್ವಾರ್ಥ ಸೇವಾ ಕಾರ್ಯ ಪ್ರಶಂಸನೀಯ ಎಂದರು. ಈ ವೇಳೆ ಪಲ್ಲಣ್ಣನವರು ಕುಲಕರ್ಣಿ, ಪ್ರಕಾಶ ನಿಂಗಪ್ಪ ಬನ್ನಿ, ಚಂಬಣ್ಣ ಬಾಳಿಕಾಯಿ, ಗೋಪಾಲ ಪಡ್ನೀಸ್, ನಿಂಗಪ್ಪ ತಹಸೀಲ್ದಾರ, ಗುರುರಾಜ ಕುಲಕರ್ಣಿ, ಕೆ.ಆರ್. ದೇಶಪಾಂಡೆ, ನಾಗರಾಜ ಹುಯಿಲಗೋಳ, ನಿಂಗಪ್ಪ ದುರಗಣ್ಣವರ, ವಿಕ್ರಮಾಚಾರ್ಯ ಗಡಗಿ, ಗೋಪಾಲ ಪಡ್ನಿಸ್, ಅನಿಲ ಕುಲಕರ್ಣಿ, ನೀಲಪ್ಪ ಪಡಗೇರಿ ಹಾಗೂ ಮಂತ್ರಾಲಯ ಪಾದಯಾತ್ರಾ ಸಂಘದ ಸದಸ್ಯರು ಮುಂತಾದವರಿದ್ದರು. ಕೃಷ್ಣ ಕುಲಕರ್ಣಿ ನಿರೂಪಿಸಿದರು.

ಸುಡುವ ಬಿಸಿಲ ಬೇಗೆಯ ನಡುವೆಯೂ ಶಾಂತರಾಗಿ ಕುಳಿತುಕೊಂಡು ಅಸ್ತಮಾ ರೋಗಿಗಳು ಔಷಧಿ ಸೇವಿಸಿದರು. ಚಿಕ್ಕೋಡಿಯಿಂದ ಆಗಮಿಸಿದ್ದ ಸಂಜೀವ ಮಡಿವಾಳರ ಅವರು ಕಳೆದ ಮೂರ್‍ನಾಲ್ಕು ವರ್ಷದಿಂದ ಮಗಳಿಗೆ ಈ ಔಷಧಿ ಕೊಡಿಸುತ್ತಿದ್ದು, ಆರೋಗ್ಯ ಬಹುತೇಕ ಸುಧಾರಿಸಿದ್ದರಿಂದ ಈ ವರ್ಷ 50 ಜನ ಅಸ್ತಮಾ ಬಾಧಿತರನ್ನು ಕರೆದುಕೊಂಡು ಬಂದಿದ್ದಾಗಿ ಹೇಳಿದರು.

## ನಾಳೆ ವಿದ್ಯುತ್ ವ್ಯತ್ಯಯ

■ವಿಜಯಸಾಕ್ಷಿ ಸುದ್ದಿ, ಗದಗ

110 ಕೆವ್ಹಿ ಶಿರಹಟ್ಟಿ ಉಪ ವಿದ್ಯುತ್ ವಿತರಣಾ ಕೇಂದ್ರದಲ್ಲಿ ತ್ರೈಮಾಸಿಕ ಕೆಲಸ ಕೈಗೊಳ್ಳುವುದರಿಂದ ಜೂನ್ 11ರಂದು ಮುಂಜಾನೆ 10 ಗಂಟೆಯಿಂದ ಸಾಯಂಕಾಲ 5.30 ಗಂಟೆಯವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗುತ್ತದೆ. ಕಾರಣ 110 ಕೆವ್ಹಿ ಶಿರಹಟ್ಟಿ ಉಪಕೇಂದ್ರದಿಂದ ವಿದ್ಯುತ್ ಪೂರೈಕೆಯಾಗುತ್ತಿರುವ ನಗರ / ಗ್ರಾಮೀಣ ಪ್ರದೇಶಗಳ 11 ಕೆವ್ಹಿ ವಿತರಣಾ ಮಾರ್ಗಗಳಲ್ಲಿ, ಎನ್.ಜೆ.ವೈ ಫೀಡರ್, ಇ.ಐ.ಪಿ ಫೀಡರ್, ಕುಡಿಯುವ ನೀರಿನ ಫೀಡರ್, ಕೈಗಾರಿಕಾ ಫೀಡರ್, ಐ.ಪಿ.ಪಿ ಫೀಡರ್ ಹಾಗೂ ಮೆ: ಬಿ.ಪಿ.ಸಿ.ಎಲ್ 1 ಮತ್ತು 2, ಎಲಿಶಿರೂರ ಇವರ ಗಾಳಿಯಂತ್ರ ಘಟಕಕ್ಕೆ ವಿದ್ಯುತ್ ವ್ಯತ್ಯಯವಾಗಲಿದೆ. ಕಾರಣ ಸಾರ್ವಜನಿಕರು ಸದರಿ ಪ್ರಕಟಣೆ ಗಮನಿಸಿ ಕಂಪನಿಯೊಂದಿಗೆ ಸಹಕರಿಸಬೇಕಾಗಿ ಪ್ರಕಟಣೆ ತಿಳಿಸಿದೆ.

## ಸಹಾಯಧನಕ್ಕೆ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

2025–26ನೇ ಸಾಲಿನಲ್ಲಿ ತೋಟಗಾರಿಕೆ ಇಲಾಖೆಯಿಂದ ಕೇಂದ್ರ ಪುರಸ್ಕೃತ ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿ ಜಿಲ್ಲೆಯಲ್ಲಿ ತೋಟಗಾರಿಕೆ ಬೆಳೆಗಳಾದ ದ್ರಾಕ್ಷಿ, ಮಾವು , ಅಂಜೂರ , ಬಾಳೆ, ನಿಂಬೆ , ಪೇರಲ, ದಾಳಿಂಬೆ, ಡ್ರ್ಯಾಗನ ಹಣ್ಣು , ಪಪ್ಪಾಯಿ, ಹುಣಸೆ ಹಣ್ಣುಗಳ ಪ್ರದೇಶ ವಿಸ್ತರಣೆ, ಹೈಬ್ರಿಡ್ ತರಕಾರಿ, ಹೂವು ಪ್ರದೇಶ ವಿಸ್ತರಣೆ, ಔಷಧೀಯ ಮತ್ತು ಸುಗಂಧ ದ್ರವ್ಯ ಬೆಳೆಗಳ ಪ್ರದೇಶ ವಿಸ್ತರಣೆ , ಅನುತ್ಪಾದಕ ತೋಟಗಳ ಆಕಾರ ನಿರ್ವಹಣೆ ಮತ್ತು ಪುನಶ್ಚೇತನ ಕಾರ್ಯಕ್ರಮ , ತೋಟಗಾರಿಕೆಯಲ್ಲಿ ಯಾಂತ್ರೀಕರಣ, ವೈಯಕ್ತಿಕ ನೀರು ಸಂಗ್ರಹಣಾ ಘಟಕ, ಸಂರಕ್ಷಿತ ಬೇಸಾಯ ಕಾರ್ಯಕ್ರಮದಡಿ ಹಸಿರು ಮನೆ ಹಾಗೂ ನೆರಳು ಪರದೆ ಘಟಕಗಳ ನಿರ್ಮಾಣ , ಫಾರ್ಮಗೇಟ್ ಪ್ಯಾಕ್ ಹೌಸ್ ಘಟಕ ಹಾಗೂ ಈರುಳ್ಳಿ ಶೇಖರಣಾ ಘಟಕಗಳ ನಿರ್ಮಾಣಕ್ಕೆ ಸಹಾಯಧನದ ಸೌಲಭ್ಯವಿದ್ದು ಆಸಕ್ತ ರೈತರು ಸಂಬಂಧಿಸಿದ ತಾಲ್ಲೂಕು ತೋಟಗಾರಿಕೆ ಕಚೇರಿಗಳಿಗೆ ಸಂಪರ್ಕಿಸಿ ಅರ್ಜಿ ಸಲ್ಲಿಸಲು ತೋಟಗಾರಿಕೆ ಉಪ ನಿರ್ದೇಶಕ (ಗದಗ ಜಿಲ್ಲಾ ಪಂಚಾಯತ್) ಇವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ

### ರಸ್ತೆ ಕಾಮಗಾರಿ ಪ್ರಾರಂಭವಾಗಿ ಒಂದೂವರೆ ತಿಂಗಳು ಕಳೆದರೂ ಪ್ರಗತಿಯಿಲ್ಲ

# ಕುಂಟುತ್ತ ಸಾಗಿದ ರಸ್ತೆ ಕಾಮಗಾರಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಮುಖ್ಯ ಬಜಾರ್ ರಸ್ತೆ ಅಭಿವೃದ್ಧಿ ಕಾಮಗಾರಿ ಸ್ಥಗಿತಗೊಂಡಿದ್ದರಿಂದ ಸಾರ್ವಜನಿಕರು ನಿತ್ಯ ಪರದಾಡುವಂತಾಗಿದೆ. ಪಟ್ಟಣದ ಹೆದ್ದಾರಿಯೇ ಆಗಿರುವ ಈ ರಸ್ತೆ ಸಂಪರ್ಕ ಕಳೆದ ಒಂದೂವರೆ ತಿಂಗಳಿಂದ ಸಂಪೂರ್ಣ ಕಡಿತಗೊಂಡಿದ್ದು, ರೈತರು, ವ್ಯಾಪಾರಸ್ಥರು, ಜನಸಾಮಾನ್ಯರು, ಶಾಲಾ ಮಕ್ಕಳು, ರೋಗಿಗಳು, ವೃದ್ಧರು, ಅಟೋ ಚಾಲಕರ ಪರಿಸ್ಥಿತಿ ಹೇಳತೀರದಾಗಿದೆ.

ದೂದಪೀರಾಂ ದರ್ಗಾ, ಕೋರ್ಟ್, ತಹಸೀಲ್ದಾರ ಕಚೇರಿ, ಶಾಲೆ ಸೇರಿ ನಿತ್ಯ ಕಾರ್ಯಕ್ಕೆ ಹೋಗಲು ರಸ್ತೆ ಇಲ್ಲದಂತಾಗಿದೆ. ಚಿಕ್ಕದಾದ ಒಳರಸ್ತೆ ಬಳಸಿ ಬೈಕ್, ಅಟೋಗಳು ಮಾತ್ರ ಹೋಗುತ್ತವೆಯಾದ್ದರಿಂದ ಸಾಕಷ್ಟು ಸಮಸ್ಯೆ ತಲೆದೋರಿದೆ. ದರ್ಗಾ, ಕೋರ್ಟ್, ತಹಸೀಲ್ದಾರ ಕಚೇರಿಗೆ ಮುಖ್ಯ ರಸ್ತೆ ಮಾರ್ಗದಲ್ಲಿ ಬರುವ ವಾಹನಗಳಿಗೆ ವಾಪಸ್ ಹೋಗಲು ಅವಕಾಶವಿಲ್ಲ. ಮಳೆಯಾದರಂತೂ ನರಕಯಾತನೆ ಅನುಭವಿಸುತ್ತಾ ಹಿಡಿಶಾಪ ಹಾಕುವಂತಾಗಿದೆ.



ಕಾಮಗಾರಿಗೆ ಬಳಸುವ ಮಣ್ಣು ಕಳಪೆಯಾಗಿದೆ ಎಂದು ಸಾರ್ವಜನಿಕರು ವಿರೋಧ ವ್ಯಕ್ತಪಡಿಸಿದ್ದರಿಂದ ಬಳಸಿದ ಮಣ್ಣಿನ ಗುಣಮಟ್ಟದ ಪರೀಕ್ಷೆಗಾಗಿ ಕಳುಹಿಸಲಾಗಿದೆ. ಆದಷ್ಟು ಬೇಗ ಕಾಮಗಾರಿ ಪ್ರಾರಂಭಿಸುವಂತೆ ಮತ್ತು ಗುಣಮಟ್ಟದ ಕಾಮಗಾರಿ ಮಾಡುವಂತೆ ಗುತ್ತಿಗೆದಾರರಿಗೆ ಕಟ್ಟುನಿಟ್ಟಿನ ಸೂಚನೆ ನೀಡಲಾಗುವುದು.

– **ಮಹೇಶ ಹಡಪದ.**
ಮುಖ್ಯಾಧಿಕಾರಿ.

ರಸ್ತೆ ಕಾಮಗಾರಿ ಪ್ರಾರಂಭವಾಗಿ ಒಂದೂವರೆ ತಿಂಗಳು ಕಳೆದರೂ ಪ್ರಗತಿ ಕಾಣದಿರುವುದಕ್ಕೆ ಅಧಿಕಾರಿಗಳ, ಜನಪ್ರತಿನಿಧಿಗಳ ಹಾಗೂ ಗುತ್ತಿಗೆದಾರರ ನಿರ್ಲಕ್ಷವೇ ಕಾರಣವಾಗಿದೆ. ರೈತರು, ಸಾರ್ವಜನಿಕರು, ಶಾಲಾ ಮಕ್ಕಳು, ಅಟೋ ಚಾಲಕರು, ವ್ಯಾಪಾರಸ್ಥರು ಪಡಬಾರದ ಯಾತನೆ ಅನಭವಿಸುತ್ತಿದ್ದಾರೆ. ಪುರಸಭೆಯವರು ಕಳಪೆ ಕಾಮಗಾರಿಗೆ ಅವಕಾಶ ಕೊಡದೇ ತ್ವರಿತಗತಿಯಲ್ಲಿ ಗುಣಮಟ್ಟದ ಕಾಮಗಾರಿ ಮಾಡಿಸಬೇಕು. ನಿಧಾನಗಗತಿ ಮತ್ತು ಕಳಪೆ ಕಾಮಗಾರಿ ವಿರುದ್ಧ ಪುರಸಭೆಯ ಮುಂದೆ ಸಾರ್ವಜನಿಕರೊಡಗೂಡಿ ಪ್ರತಿಭಟನೆ ಮಾಡಲಾಗುವುದು.

– **ಮಂಜುನಾಥ ಮಾಗಡಿ, ರಾಜು ಅರಳಿ.**
ಸ್ಥಳೀಯ ನಾಗರಿಕರು.

ಪುರಸಭೆಯ 15ನೇ ಹಣಕಾಸಿನ 76 ಲಕ್ಷ ರೂ ಅನುದಾನದಲ್ಲಿ ಮುಖ್ಯ ಬಜಾರ್ ರಸ್ತೆಯ ಗ್ರಾಮ ಚಾವಡಿಯಿಂದ ಭರಮದೇವರ ಸರ್ಕಲ್‌ವರೆಗಿನ 260 ಮೀಟರ್ ರಸ್ತೆ ಅಭಿವೃದ್ಧಿ (ಸಿಸಿ) ಕಾಮಗಾರಿಗೆ ಶಾಸಕ ಡಾ. ಚಂದ್ರು ಲಮಾಣಿ ಎಪ್ರಿಲ್‌ನಲ್ಲಿ ಭೂಮಿಪೂಜೆ ನೆರವೇರಿಸಿದ್ದರು. ಅರ್ಧಂಬರ್ಧ ರಸ್ತೆ ಅಗೆದು ಕೈ ಬಿಟ್ಟಿದ್ದ ಸಂದರ್ಭದಲ್ಲಿ ಸಾರ್ವಜನಿಕರ ಒತ್ತಾಯದಿಂದ ಅಗೆದ ರಸ್ತೆಗೆ ಮಣ್ಣು ಹಾಕಲು ಪ್ರಾರಂಭಿಸಿದ್ದರು. ಒಂದು ತಿಂಗಳಲ್ಲಿ ಮಾಡಿ ಮುಗಿಸಬಹುದಾದ ರಸ್ತೆ ಕಾಮಗಾರಿ ಒಂದೂವರೆ ತಿಂಗಳಿಂದ ಕುಂಟುಂತ್ತಾ ಸಾಗಿದೆ. ಪಟ್ಟಣದಲ್ಲಿ ಈ ರೀತಿ ಅನೇಕ ಕಾಮಗಾರಿಗಳು ವರ್ಷಗಳಿಂದ ಅರ್ಧಕ್ಕೆ ನಿಂತರೂ ಯಾರೂ ಕೇಳುವವರೇ ಇಲ್ಲದಂತಾಗಿರುವುದು ದುರ್ದೈವ. ರಸ್ತೆಗೆ ಹಾಕಿರುವ ಮಣ್ಣು ಕೂಡ ಸಂಪೂರ್ಣ ಕಳಪೆಯಾಗಿದ್ದು, ಉತ್ತಮ ಗುಣಮಟ್ಟದ ಕೆಂಪು ಗೊರಸು ಹಾಕುವಂತೆ ಸಾರ್ವಜನಿಕರು ತಡೆದ ಕಾರಣದಿಂದ ಗುತ್ತಿಗೆದಾರ ಕಾಮಗಾರಿ ಸ್ಥಗಿತಗೊಳಿಸಿದ್ದಾರೆ.



## ತಾಲೂಕಾಡಳಿತದಿಂದ ಎಂ.ಕೆ. ಲಮಾಣಿಗೆ ಸನ್ಮಾನ



■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಸ್ಥಳೀಯ ಎಫ್.ಎಂ. ಡಬಾಲಿ ಪದವಿಪೂರ್ವ ಕಾಲೇಜಿನ ಉಪನ್ಯಾಸಕ ಎಂ.ಕೆ. ಲಮಾಣಿ ಸೇವೆಯಿಂದ ನಿವೃತ್ತಿ ಹೊಂದಿದ ಪ್ರಯುಕ್ತ ತಹಸೀಲ್ದಾರ ಅನಿಲ ಬಡಿಗೇರ ಅಧ್ಯಕ್ಷತೆಯಲ್ಲಿ ತಾಲೂಕಾ ಆಡಳಿತದ ವತಿಯಿಂದ ಅವರನ್ನು ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ತಹಸೀಲ್ದಾರ ಅನಿಲ ಬಡಿಗೇರ, ಸರಕಾರಿ ಸೇವೆಯಲ್ಲಿ ವಯೋ ನಿವೃತ್ತಿ ಅನಿವಾರ್ಯವಾಗಿದೆ. ಎಂ.ಕೆ. ಲಮಾಣಿ ಅವರು ತಾಲೂಕಾಡಳಿತದ ವತಿಯಿಂದ ನಡೆಯುತ್ತಿದ್ದ ಅನೇಕ ಕಾರ್ಯಕ್ರಮಗಳನ್ನು ಅಚ್ಚುಕಟ್ಟಾಗಿ ನಿರೂಪಣೆ ಮಾಡುತ್ತಾ ಬಂದಿದ್ದಾರೆ. ವಿಶೇಷವಾಗಿ ಚುನಾವಣಾ ಸಂದರ್ಭದಲ್ಲಿ ಮಸ್ಟರಿಂಗ್ ಕೇಂದ್ರಗಳಲ್ಲಿ ಅಧಿಕಾರಿಗಳ ನಿರ್ದೇಶನದಂತೆ ಚುನಾವಣೆ ಸಿಬ್ಬಂದಿಗೆ ತಮ್ಮ ನಿರೂಪಣೆಯ ಮೂಲಕ ಕೆಲಸವನ್ನು ಮಾಡಿದ್ದಾರೆ. ಮುಂದಿನ ದಿನಗಳಲ್ಲಿ ಸಮಾಜಕ್ಕೆ ಇವರ ಸೇವೆ ಇನ್ನಷ್ಟು ಸಿಗಲಿ ಎಂದರು.

ಜಿಲ್ಲಾ ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಕೆ.ಎ. ಬಳಿಗೇರ ಮಾತನಾಡಿ, ಎಂ.ಕೆ. ಲಮಾಣಿ ಬಡ ಕುಟುಂಬದಲ್ಲಿ ಜನಿಸಿ, ಉಪನ್ಯಾಸಕನಾಗಿ, ಕನ್ನಡ ಸಾಹಿತ್ಯ ಪರಿಷತ್ ತಾಲೂಕಾ ಅಧ್ಯಕ್ಷರಾಗಿ, ಮಾಧ್ಯಮಿಕ ಶಾಲಾ ಶಿಕ್ಷಕ ಸಂಘದ ಜಿಲ್ಲಾಧ್ಯಕ್ಷರಾಗಿ ಇನ್ನೂ ಹತ್ತು ಹಲವು ಸಂಘಟನೆಗಳಲ್ಲಿ ತಮ್ಮನ್ನು ತೊಡಗಿಸಿಕೊಂಡಿದ್ದು, ಇವರ ಸೇವೆ ಸದಾ ಹೀಗೆ ಮುಂದುವರೆಯಲಿ ಎಂದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಎಂ.ಕೆ. ಲಮಾಣಿ, ತಾಲೂಕಾ ಆಡಳಿತದ ವತಿಯಿಂದ ನಡೆಯುತ್ತಿದ್ದ ಅನೇಕ ಕಾರ್ಯಕ್ರಮಗಳಲ್ಲಿ ನಿರೂಪಣೆ ಮಾಡುವ ಭಾಗ್ಯ ನನ್ನದಾಗಿದ್ದು, ಇದರಿಂದ ನನ್ನ ವೃತ್ತಿ ಬದುಕಿನಲ್ಲಿ ಮರೆಯಲಾಗದ ಅನೇಕ ಕ್ಷಣಗಳನ್ನು ಕಂಡಿದ್ದೇನೆ. ತಾಲೂಕಾಡಳಿತದ ಸನ್ಮಾನ ನನಗೆ ಇನ್ನಷ್ಟು ಸಮಾಜಮುಖಿ ಕೆಲಸಕ್ಕೆ ಪ್ರೇರಣೆ ನೀಡಿದೆ ಎಂದರು.

ಶಿರಸ್ತೇದಾರ ಎಸ್.ಎಸ್. ಅಸ್ಕಿ, ಮುಲ್ಲಾ, ಪೂಜಾರ, ಕಂದಾಯ ನಿರೀಕ್ಷಕ ಕಾತ್ರಾಳ, ಕಗ್ಗಲಗೌಡರ, ರಾಧಾ ದೇಸಾಯಿಪಟ್ಟಿ, ಮಂಜುಳಾ ಆಕಳದ, ಅಡಿವೆಣ್ಣವರ ಮುಂತಾದವರು ಉಪಸ್ಥಿತರಿದ್ದರು.

## ನಿವೃತ್ತ ನೌಕರರ ಸಂಘಕ್ಕೆ ನಿವೇಶನ ನೀಡಿ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಟ್ಟಣದಲ್ಲಿ ಹಲವು ವರ್ಷಗಳಿಂದ ಹಿರಿಯರ ಕ್ಷೇಮಾಭಿವೃದ್ಧಿ ಸಂಘ ಹಾಗು ನಿವೃತ್ತ ನೌಕರರ ಸಂಘಗಳು ಜಂಟಿಯಾಗಿ ಕಾರ್ಯ ನಿರ್ವಹಿಸುತ್ತಿವೆ. ಅವರಿಗೆ ಸಭೆ ಸಮಾರಂಭ ನಡೆಸಲು ಸೂಕ್ತ ಜಾಗೆ ಇಲ್ಲ. ಆದ್ದರಿಂದ ಪಟ್ಟಣ ಪಂಚಾಯಿತಿ ವತಿಯಿಂದ ಸಂಘಕ್ಕೆ ಒಂದು ನಿವೇಶನ ಅಥವಾ ಕಟ್ಟಡವನ್ನು ನೀಡಬೇಕೆಂದು ಆಗ್ರಹಿಸಿ ಎರಡೂ ಸಂಘಗಳ ಸದಸ್ಯರು ಪ.ಪಂ ಅಧ್ಯಕ್ಷ ಫಕೀರಪ್ಪ ಮಳ್ಳಿಯವರಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ನಿವೃತ್ತ ನೌಕರರ ಸಂಘದ ಅಧ್ಯಕ್ಷ ಡಿ.ಎ. ಅರವಟಗಿಮಠ, ನಮ್ಮ ಸಂಘವು ಅಸ್ತಿತ್ವಕ್ಕೆ ಬಂದು ಈಗಾಗಲೇ 10 ವರ್ಷಗಳಾದವು. ಕಳೆದ ಐದಾರು ವರ್ಷಗಳ ಹಿಂದೆಯೇ ನಾವು ನಿವೇಶನ ಅಥವಾ ಕಟ್ಟಡಕ್ಕಾಗಿ ಮನವಿ ನೀಡಿದ್ದೇವೆ. ಆದರೆ ಈವರೆಗೂ ಅದಕ್ಕೆ ಯಾವ ಸ್ಪಂದನೆಯೂ ಸಿಕ್ಕಿಲ್ಲ ಎಂದರು.



ಹಿರಿಯ ನಾಗರಿಕರ ಸಂಘದ ಅಧ್ಯಕ್ಷ, ನ್ಯಾಯವಾದಿ ವೀರಣ್ಣ ದಿಂಡೂರ ಮಾತನಾಡಿ, ಹಿರಿಯ ನಾಗರಿಕರಿಗೆ ಬೇಕಾದ ಸೌಲಭ್ಯಗಳನ್ನು ಸ್ಥಳೀಯ ಪಟ್ಟಣ ಪಂಚಾಯಿತಿ ಒದಗಿಸಬೇಕೆಂಬುದು ಕೇಂದ್ರ ಸರಕಾರದ ನಿರ್ಧಾರವಾಗಿದೆ. ಆ ನಿರ್ಧಾರವನ್ನು ಇಲ್ಲಿ ಜಾರಿಗೊಳಿಸಿ ನಮಗೆ ಅನುಕೂಲ ಮಾಡಿಕೊಡಿ. ನಮಗೊಂದು ಜಾಗೆಯಂತಾದರೆ ನಮ್ಮ ಚಟುವಟಿಕೆಗಳನ್ನು ನಡೆಸಲು ನಮಗೆ ಅನುಕೂಲವಾಗುತ್ತದೆ ಎಂದರು. ಮನವಿ ಸ್ವೀಕರಿಸಿದ ಅಧ್ಯಕ್ಷ ಫಕೀರಪ್ಪ ಮಳ್ಳಿ ಮಾತನಾಡಿ, ಸಂಘದ ಮನವಿಯ ಕುರಿತು ಕೂಲಂಕುಷವಾಗಿ ಪರಿಶೀಲಿಸಿ ಆದಷ್ಟು ಬೇಗನೆ ನಿಮಗೊಂದು ಜಾಗೆಯ ವ್ಯವಸ್ಥೆಯನ್ನು ಮಾಡುತ್ತೇನೆ ಎಂದರು. ಈ ಸಂದರ್ಭದಲ್ಲಿ ಸಂಘದ ಸದಸ್ಯರಾದ ಡಾ. ಆರ್.ಕೆ. ಗಚ್ಚಿನಮಠ, ವೀರಭದ್ರಪ್ಪ ಕೆರಿಯವರ, ಶಿವಯೋಗಿ ಜಕ್ಕಲಿ, ಎಂ.ಎಸ್. ದಢೇಸೂರಮಠ, ಸುರೇಶ ಬಾಗಲಿ, ಕಟ್ಟಿಮನಿ, ಕಲಾಲಬಂಡಿ, ಗುರುಪಾದಪ್ಪ ಬೆಲ್ಲದ, ಕಾಶಪ್ಪ ಸಂಗನಾಳ, ಶಿಸ್ತೆದಾರ, ಅರುಣ ಕುಲಕರ್ಣಿ ಮಲ್ಲಸಮುದ್ರಮಠ, ಎಸ್.ಕೆ. ಪಾಟೀಲ, ಎಚ್.ವೈ. ಮಣ್ಣೊಡ್ಡರ ಮುಂತಾದವರಿದ್ದರು.

## ನಿಧನ

### ಡಾ. ನಾರಾಯಣ ಹೆಬಸೂರ



**ಲಕ್ಷ್ಮೇಶ್ವರ:** ತಾಲೂಕಿನ ಸೂರಣಗಿ ಗ್ರಾಮದ ಖ್ಯಾತ ವೈದ್ಯರು, ಶಿಕ್ಷಣ ಪ್ರೇಮಿಗಳು ಹಾಗೂ ಸಾಹಿತಿಗಳೂ ಆಗಿದ್ದ ಡಾ. ನಾರಾಯಣ ಡಿ.ಹೆಬಸೂರು (62) ಸೋಮವಾರ ನಿಧನರಾದರು. ಮೃತರಿಗೆ ಪತ್ನಿ, ಮೂವರು ಪುತ್ರಿಯರು ಇದ್ದಾರೆ. ಡಾ. ಹೆಬಸೂರರು ಕಳೆದ 20 ವರ್ಷಗಳಿಂದ ದಿ. ಡಿ.ಬಿ. ಹೆಬಸೂರ ಶಿಕ್ಷಣ ಸಂಸ್ಥೆಯನ್ನು ನಡೆಸುತ್ತಿದ್ದರಲ್ಲದೆ, ಅನೇಕ ಕವನ ಸಂಕಲನಗಳನ್ನು ಪ್ರಕಟಿಸಿದ್ದಾರೆ.

ಸಂತಾಪ: ಡಾ. ನಾರಾಯಣ ಹೆಬಸೂರ ಅವರ ನಿಧನಕ್ಕೆ ಜಿಲ್ಲೆಯ ಅನೇಕ ಗಣ್ಯರು, ಜನಪ್ರತಿನಿಧಿಗಳು, ಸ್ಥಳೀಯ ಜನಪ್ರತಿನಿಧಿಗಳು, ಜಿಲ್ಲಾ, ತಾಲೂಕಾ ವೈದ್ಯರ ಸಂಘ ಮತ್ತಿತರ ಸಂಘಟನೆಗಳು ಸಂತಾಪ ವ್ಯಕ್ತಪಡಿಸಿದ್ದಾರೆ.

## ಕಾರಿನ ಡೋರ್ ತೆಗೆದು 6.30 ಲಕ್ಷ ನಗದು ಹೊತ್ತೊಯ್ದ ಖದೀಮ!

■ವಿಜಯಸಾಕ್ಷಿ ಸುದ್ದಿ, ಹಾಸನ

ಜಿಲ್ಲೆಯ ಅರಸೀಕೆರೆ ಪಟ್ಟಣದ ಸುಭಾಷ್ ನಗರದ ರಸ್ತೆಯಲ್ಲಿ ನಿಲ್ಲಿಸಿದ್ದ ಕಾರಿನ ಡೋರ್ ತೆಗೆದು ಕಾರಿನಲ್ಲಿಟ್ಟಿದ್ದ 6.30 ಲಕ್ಷ ರೂ. ಹಣ ಕದ್ದು ಕಳ್ಳ ಪರಾರಿಯಾಗಿರುವ ಘಟನೆ ಜರುಗಿದೆ. ಹಣ ಕಳೆದುಕೊಂಡವರನ್ನು ಸುರೇಶ್ ಎಂದು ಗುರುತಿಸಲಾಗಿದೆ. ಇವರು ಒಂಬತ್ತು ವರ್ಷಗಳಿಂದ ಅರಸೀಕೆರೆ ಪಟ್ಟಣದ ಎಪಿಎಂಸಿಯಲ್ಲಿ ಕೊಬ್ಬರಿ ಅಂಗಡಿ ಇಟ್ಟುಕೊಂಡಿದ್ದಾರೆ.



ಅರಸೀಕೆರೆಯ ಫೆಡರಲ್ ಬ್ಯಾಂಕ್‌ನಿಂದ ಆರು ಲಕ್ಷ ನಗದು ಹಣ ಡ್ರಾ ಮಾಡಿಕೊಂಡು ಬಂದಿದ್ದರು. ಇದರ ಜೊತೆಗೆ ತಮ್ಮ ಬಳಿ ಇದ್ದ 30 ಸಾವಿರ ಸೇರಿಸಿ ಒಟ್ಟು 6.30 ಲಕ್ಷ ರೂ. ಹಣವನ್ನು ತಮ್ಮ ಕಾರಿನಲ್ಲಿ ಇಟ್ಟಿದ್ದರು. ಎಪಿಎಂಸಿಯಲ್ಲಿರುವ ತಮ್ಮ ಅಂಗಡಿ ಮುಂಭಾಗ ಹಣದ ಸಮೇತ ಕಾರು ನಿಲ್ಲಿಸಿದ್ದರು. ಕಾರು ಲಾಕ್ ಮಾಡದೇ ಅಂಗಡಿಯೊಳಗೆ ಹೋಗಿದ್ದರು.

ವಾಪಸ್ ಬಂದು ನೋಡಿದಾಗ ಹಣ ಕಳುವಾಗಿದೆ. ಸಿಸಿಟಿವಿ ಪರಿಶೀಲಿಸಿದಾಗ ಹಣ ಕಳುವಾಗಿರುವುದು ಬೆಳಕಿಗೆ ಬಂದಿದೆ. ಸ್ಥಳಕ್ಕೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka